ಕರ್ನಾಟಕ ವಿಧಾನ ಪರಿಷತ್ತು

# ನೂರ ಐವತ್ತೆರಡನೆಯ ಅಧಿವೇಶನದ

# ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

(ದಿನಾಂಕ: 12.02.2024 ರಿಂದ
29.02.2024ರವರೆಗೆ)

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯ
ವಿಧಾನ ಸೌಧ, ಬೆಂಗಳೂರು-560 001

# ನೂರ ಐವತ್ತೆರಡನೆಯ ಅಧಿವೇಶನದ

# ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

(ದಿನಾಂಕ: 12.02.2024 ರಿಂದ
29.02.2024ರವರೆಗೆ)

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯ
ವಿಧಾನ ಸೌಧ, ಬೆಂಗಳೂರು-560 001

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆರಡನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಸೋಮವಾರ, ದಿನಾಂಕ:12.02.2024**

**(01)**

ದಿನಾಂಕ:12.02.2024 ರಂದು ಮಧ್ಯಾಹ್ನ 12.30 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

'ವಂದೇ ಮಾತರಂ' ಗೀತೆಯೊಂದಿಗೆ ಗೌರವ ಸೂಚಿಸುವ ಮೂಲಕ ಸದನದ ಕಾರ್ಯಕಲಾಪಗಳು ವಿಧ್ಯುಕ್ತವಾಗಿ ಆರಂಭಗೊಂಡಿತು.

**ಭಾರತದ ಸಂವಿಧಾನ**

**ಪೀಠಿಕೆ**

ಮಾನ್ಯ ಸಭಾಪತಿಯವರು ಎಲ್ಲಾ ಶಾಸಕರಿಗೂ ಸಂವಿಧಾನದ ಪೀಠಿಕೆಯನ್ನು ಬೋಧಿಸಿದರು.

1. ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಉಭಯ ಸದನಗಳ ಸದಸ್ಯರುಗಳನ್ನುದ್ದೇಶಿಸಿ ಮಾಡಿದ ಭಾಷಣದ ಪ್ರತಿಯನ್ನು ಕಾರ್ಯದರ್ಶಿಯವರು ಸದನದ ಮುಂದೆ ಮಂಡಿಸಿದರು.

**2. ಪ್ರಕಟಣೆಗಳು**

1. ಭಾರತೀಯ ಜನತಾ ಪಕ್ಷದ ಅಧ್ಯಕ್ಷರು, ದಿನಾಂಕ:26.12.2023ರ ಪತ್ರದಲ್ಲಿ ತಿಳಿಸಿರುವ ರೀತ್ಯಾ, ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 2(2)ರ ಪ್ರಕಾರ ವಿಧಾನ ಪರಿಷತ್ತಿನ ಶಾಸಕರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿ ಇವರನ್ನು ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರನ್ನಾಗಿ ದಿನಾಂಕ:26.12.2023ರಿಂದ ಜಾರಿಗೆ ಬರುವಂತೆ ಮಾನ್ಯತೆ ನೀಡಲಾಗಿದೆ ಎಂದು ಮಾನ್ಯ ಸಭಾಪತಿಯವರು ಪ್ರಕಟಿಸಿದರು.

2. ಕರ್ನಾಟಕ ವಿಧಾನ ಮಂಡಲದ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು(ತಿದ್ದುಪಡಿ) ಅಧಿನಿಯಮ ೨೦೦೯ರ ಪ್ರಕರಣ ೩(ಸಿಸಿಸಿ)ರ ರೀತ್ಯಾ ವಿಧಾನ ಪರಿಷತ್ತಿನ ಮಾನ್ಯ ಶಾಸಕರಾದ ಶ್ರೀ ಎನ್. ರವಿಕುಮಾರ್ ಅವರನ್ನು ದಿನಾಂಕ:27.12.2023ರಿಂದ ಜಾರಿಗೆ ಬರುವಂತೆ ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರನ್ನಾಗಿ ನೇಮಕ ಮಾಡಲಾಗಿದೆ ಎಂದು ಮಾನ್ಯ ಸಭಾಪತಿಯವರು ಪ್ರಕಟಿಸಿದರು.

೩. ವಿಧಾನ ಪರಿಷತ್ತಿನ ಮಾನ್ಯ ವಿರೋಧ ಪಕ್ಷದ ನಾಯಕರು ದಿನಾಂಕ: ೦2.೦2.2024ರ ತಮ್ಮ ಪತ್ರದಲ್ಲಿ ತಿಳಿಸಿರುವ ರೀತ್ಯಾ, ಕರ್ನಾಟಕ ವಿಧಾನ ಪರಿಷತ್ತಿನಲ್ಲಿ ಶ್ರೀ ಸುನೀಲ್ ವಲ್ಯಾಪುರ್ ಅವರನ್ನು ಭಾರತೀಯ ಜನತಾ ಪಕ್ಷದ ಉಪ ನಾಯಕರನ್ನಾಗಿ ಮಾನ್ಯತೆ ನೀಡಲಾಗಿದೆ ಎಂದು ಮಾನ್ಯ ಸಭಾಪತಿಯವರು ಪ್ರಕಟಿಸಿದರು.

ಮಾನ್ಯ ಸಭಾನಾಯಕರು ಹಾಗೂ ಈ ಕೆಳಕಂಡ ಶಾಸಕರುಗಳು ಮಾನ್ಯ ವಿರೋಧ ಪಕ್ಷದ ನಾಯಕರು, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಮಾನ್ಯ ವಿರೋಧ ಪಕ್ಷದ ಉಪನಾಯಕರುಗಳನ್ನು ಅಭಿನಂದಿಸಿ ಮಾತನಾಡಿದರು.

ಶ್ರೀಯುತರುಗಳಾದ:

1. ಎಸ್.ಎಲ್. ಭೋಜೇಗೌಡ
2. ಡಾ: ತೇಜಸ್ವಿನಿಗೌಡ
3. ಶರವಣ ಟಿ.ಎ
4. ಯು.ಬಿ. ವೆಂಕಟೇಶ್
5. ಎಂ. ನಾಗರಾಜು
6. ಮಂಜುನಾಥ್ ಭಂಡಾರಿ
7. ಪ್ರತಾಪ್ ಸಿಂಹ ನಾಯಕ್ ಕೆ.

೮. ತಿಪ್ಪಣ್ಣಪ್ಪ ಕಮಕನೂರ

೯. ಸಿ.ಎನ್. ಮಂಜೇಗೌಡ

ಮಾನ್ಯ ವಿರೋಧ ಪಕ್ಷದ ನಾಯಕರು ಧನ್ಯವಾದ ಅರ್ಪಿಸಿದರು.

**೩. ಸಂತಾಪ ಸೂಚನೆಗಳು**

ಕಳೆದ ಅಧಿವೇಶನದ ನಂತರ ನಿಧನ ಹೊಂದಿದ ಈ ಕೆಳಕಂಡ ಗಣ್ಯರುಗಳಿಗೆ ಮಾನ್ಯ ಸಭಾಪತಿಯವರು ಸಂತಾಪ ಸೂಚನಾ ನಿರ್ಣಯವನ್ನು ಮಂಡಿಸಿದರು.

೦1. ಮಾರುತಿರಾವ್ ಡಿ ಮಾಲೆ, ವಿಧಾನ ಪರಿಷತ್ತಿನ ಮಾಜಿ ಶಾಸಕರು

೦2. ಎಸ್.ಎ. ಜಿದ್ದಿ, ವಿಧಾನ ಪರಿಷತ್ತಿನ ಮಾಜಿ ಶಾಸಕರು

೦3. ಚನ್ನಮ್ಮ ಹಳ್ಳಿಕೇರಿ, ಹಿರಿಯ ಗಾಂಧಿವಾದಿ ಹಾಗೂ ಸರ್ವೋದಯ ಕಾರ್ಯಕರ್ತೆ

೦4. ಡಾ: ಅಮೃತ ಸೋಮೇಶ್ವರ, ಜಾನಪದ ವಿದ್ವಾಂಸರು

೦5. ಗುರುಲಿಂಗಪ್ಪ ವೀರಸಂಗಪ್ಪ ಕರಡಿ, ಕರಡಿ ಮಜಲು ಕಲಾವಿದರು

ಮಾನ್ಯ ಸಭಾನಾಯಕರು ಹಾಗೂ ಮಾನ್ಯ ವಿರೋಧ ಪಕ್ಷದ ನಾಯಕರು ಮಾನ್ಯ ಸಭಾಪತಿಯವರು ಮಂಡಿಸಿದ ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

ಮೃತರ ಆತ್ಮಕ್ಕೆ ಶಾಂತಿ ಕೋರಿ ಮೌನ ಆಚರಿಸಲಾಯಿತು. ಅವರ ಕುಟುಂಬದವರಿಗೆ ಸಂತಾಪ ಸೂಚನಾ ನಿರ್ಣಯದ ಪ್ರತಿಯನ್ನು ಕಳುಹಿಸಿಕೊಡಲಾಗುವುದೆಂದು ಮಾನ್ಯ ಸಭಾಪತಿಯವರು ತಿಳಿಸಿದರು.

ಸದನವನ್ನು ಮಧ್ಯಾಹ್ನ 1.50 ಗಂಟೆಯಲ್ಲಿ ಮುಂದೂಡಿ ದಿನಾಂಕ:13.02.2024ರಂದು ಬೆಳಗ್ಗೆ 10.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು(**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆರಡನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಮಂಗಳವಾರ, ದಿನಾಂಕ:13.02.2024**

**(02)**

ಸದನವು ಬೆಳಗ್ಗೆ 10.47 ಗಂಟೆಗೆ ಮಾನ್ಯ ಉಪ ಸಭಾಪತಿಯವರ **(ಶ್ರೀ ಎಂ.ಕೆ. ಪ್ರಾಣೇಶ್)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಕಟಣೆಗಳು

ಮಾನ್ಯ ಸಭಾಪತಿಯವರು:

1. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 9ರ ಮೇರೆಗೆ ಮಾನ್ಯ ಸಭಾಪತಿಯವರ ಮತ್ತು ಉಪ ಸಭಾಪತಿಯವರ ಗೈರು ಹಾಜರಿಯಲ್ಲಿ ಸಭಾಪತಿಯವರ ಸ್ಥಾನದಲ್ಲಿ ಪದಧಾರಣ ಮಾಡಲು ಈ ಕೆಳಕಂಡ ಶಾಸಕರುಗಳನ್ನು ನಾಮನಿರ್ದೇಶನ ಮಾಡಲಾಗಿದೆ ಎಂದು ಪ್ರಕಟಿಸಿದರು.

    1. ಶ್ರೀ ಶಶೀಲ್ ಜಿ. ನಮೋಶಿ
    2. ಡಾ: ತೇಜಸ್ವಿನಿಗೌಡ
    3. ಶ್ರೀ ಮರಿತಿಬ್ಬೇಗೌಡ
    4. ಶ್ರೀ ಮಂಜುನಾಥ್ ಭಂಡಾರಿ

2. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 222ರ ರೀತ್ಯಾ ವಿಧಾನ ಪರಿಷತ್ತಿನ 152ನೇ ಅಧಿವೇಶನದಲ್ಲಿ ಈ ಕೆಳಕಂಡ ಸದಸ್ಯರುಗಳನ್ನೊಳಗೊಂಡಂತೆ ಕಾರ್ಯಕಲಾಪಗಳ ಸಲಹಾ ಸಮಿತಿಯನ್ನು ಪುನರ್ ರಚಿಸಲಾಗಿರುತ್ತದೆಂದು ಎಂದು ಪ್ರಕಟಿಸಿದರು.

**ಶ್ರೀಯುತರುಗಳಾದ:**

| | | |
|---|---|---|
| 01. | **ಪ್ರಾಣೇಶ್ ಎಂ.ಕೆ.**<br>ಮಾನ್ಯ ಉಪ ಸಭಾಪತಿಯವರು | **ಸದಸ್ಯರು** |
| 02. | **ಎನ್.ಎಸ್. ಬೋಸ್‌ರಾಜು**<br>ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಮತ್ತು ಸಭಾನಾಯಕರು | ಸದಸ್ಯರು |
| 03. | **ಕೋಟ ಶ್ರೀನಿವಾಸ ಪೂಜಾರಿ**<br>ವಿಧಾನ ಪರಿಷತ್ತಿನ ಮಾನ್ಯ ವಿರೋಧ ಪಕ್ಷದ ನಾಯಕರು | ಸದಸ್ಯರು |
| 04. | **ಸಲೀಂ ಅಹಮದ್**<br>ವಿಧಾನ ಪರಿಷತ್ತಿನ ಮಾನ್ಯ ಸರ್ಕಾರಿ ಮುಖ್ಯ ಸಚೇತಕರು | ಸದಸ್ಯರು |
| 05. | **ಎನ್. ರವಿಕುಮಾರ್**<br>ವಿಧಾನ ಪರಿಷತ್ತಿನ ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು | ಸದಸ್ಯರು |
| 06. | **ಸುನೀಲ್ ವಲ್ಯಾಪುರ್**<br>ವಿಧಾನ ಪರಿಷತ್ತಿನ ವಿರೋಧ ಪಕ್ಷದ ಉಪ ನಾಯಕರು | ಸದಸ್ಯರು |
| 07. | **ಎಸ್.ಎಲ್. ಭೋಜೇಗೌಡ**<br>ವಿಧಾನ ಪರಿಷತ್ತಿನ ಜನತಾದಳ(ಜಾ) ಶಾಸಕಾಂಗ ಪಕ್ಷದ ನಾಯಕರು | ಸದಸ್ಯರು |
| 08. | **ಎಂ.ಆರ್. ಸೀತಾರಾಂ**<br>ವಿಧಾನ ಪರಿಷತ್ತಿನ ಮಾನ್ಯ ಶಾಸಕರು | ಸದಸ್ಯರು |
| 09. | **ಎಸ್. ರವಿ**<br>ವಿಧಾನ ಪರಿಷತ್ತಿನ ಮಾನ್ಯ ಶಾಸಕರು | ಸದಸ್ಯರು |

**ವಿಶೇಷ ಆಹ್ವಾನಿತರು**

**ಶ್ರೀಯುತರುಗಳಾದ:**

| | | |
|---|---|---|
| 01. | **ಶ್ರೀ ಸಿದ್ದರಾಮಯ್ಯ** | ಮಾನ್ಯ ಮುಖ್ಯಮಂತ್ರಿಗಳು |
| 02. | **ಶ್ರೀ ಡಿ.ಕೆ. ಶಿವಕುಮಾರ್** | ಮಾನ್ಯ ಉಪ ಮುಖ್ಯಮಂತ್ರಿಗಳು |
| 03. | **ಶ್ರೀ ಹೆಚ್.ಕೆ. ಪಾಟೀಲ್** | ಮಾನ್ಯ ಕಾನೂನು, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು |

**ಮಾನ್ಯ ಸಭಾಪತಿಯವರು ಸಮಿತಿಯ ಅಧ್ಯಕ್ಷರಾಗಿರುತ್ತಾರೆ.**

## 2. ಪ್ರಶ್ನೋತ್ತರ

ದಿನಾಂಕ:13.02.2024ರಂದು ಸದನದಲ್ಲಿ ಉತ್ತರಿಸುವ ಸಮೂಹ–IIರ 1ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 1 (60) ಅರ್ಧ ಗಂಟೆ ಕಾಲಾವಧಿ ಚರ್ಚೆ
2. 2(06)

ಬೆಳಗ್ಗೆ 11.03 ಗಂಟೆಯಲ್ಲಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಸಭಾಪತಿ ಪೀಠದಲ್ಲಿ ಆಸೀನರಾದರು.

3. 3(25) ಅರ್ಧ ಗಂಟೆ ಕಾಲಾವಧಿ ಚರ್ಚೆ
4. 4(57)
5. 5(19) ತಡೆಹಿಡಿಯಲಾಯಿತು
6. 6(80)
7. 7(44)
8. 8(226)
9. 9(101)

10. 10(85)

11. 11(147)

12. 12(34)

13. 13(77)

14. 14(74)

15. 15(75)

ಮಧ್ಯಾಹ್ನ 12.20 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿ **(ಶ್ರೀ ಎಂ.ಕೆ. ಪ್ರಾಣೇಶ್)** ಅವರು ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ದಿನಾಂಕ:13.02.20204ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIರ 1ನೇ ಪಟ್ಟಿಯ ಒಟ್ಟು 95 ಪ್ರಶ್ನೆಗಳ ಪೈಕಿ 50 ಪ್ರಶ್ನೆಗಳಿಗೆ ಮಾನ್ಯ ಸಭಾನಾಯಕರು ಉತ್ತರಗಳನ್ನು ಮಂಡಿಸಿದರು.

### 3. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

| ಕ್ರ. ಸಂ. | ವಿಧೇಯಕಗಳ ಪಟ್ಟಿ | ಒಪ್ಪಿಗೆಯನ್ನು ಪಡೆದ ದಿನಾಂಕ | ಒಪ್ಪಿಗೆಯನ್ನು ನೀಡಿದವರು |
|---|---|---|---|
| 1. | ಕರ್ನಾಟಕ ಧನವಿನಿಯೋಗ (ಸಂಖ್ಯೆ–4) ವಿಧೇಯಕ, 2023 (ಬಿಲ್ ಸಂಖ್ಯೆ–28)<br>THE KARNATAKA APPROPRIATION (No-4) BILL, 2023 (L.A. Bill No. 28 ) | 30.12.2023 | ರಾಜ್ಯಪಾಲರು |
| 2. | ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ಎರಡನೇ ತಿದ್ದುಪಡಿ) ವಿಧೇಯಕ, 2023 (ಬಿಲ್ ಸಂ.23) | 30.12.2023 | ರಾಜ್ಯಪಾಲರು |

| | | | |
|---|---|---|---|
| | THE KARNATAKA MOTOR VEH ICLES TAXATION (SECOND AMENDMENT) BILL, 2023 (LA Bill No.23) | | |
| 3. | ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ, 2023 (ಬಿಲ್ ಸಂ.19)<br>THE KARNATAKA GOODS AND SERVICES TAX (SECOND AMENDMENT) BILL, 2023 (LA Bill No.19) | 29.01.2024 | **ರಾಜ್ಯಪಾಲರು** |
| 4. | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2023 (ಬಿಲ್ ಸಂಖ್ಯೆ–16)<br>THE KARNATAKA GRAM SWARAJ AND PANCHAYAT RAJ (AMENDMENT) BILL, 2023 (LA Bill No. 16) | 29.01.2024 | **ರಾಜ್ಯಪಾಲರು** |
| 5. | ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ (ತಿದ್ದುಪಡಿ) ವಿಧೇಯಕ, 2023 (ಬಿಲ್ ಸಂಖ್ಯೆ–18)<br>THE KARNATAKA COMPULSORY SERVICE BY CANDIDATES COMPLETED MEDICAL COURSES (AMENDMENT) BILL, 2023 (LA Bill No.18) | 29.01.2024 | **ರಾಜ್ಯಪಾಲರು** |
| 6. | ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ (ಹಂಚಿಕೆ ಮಾಡಬಹುದಾದ ಆಯವ್ಯಯ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) (ತಿದ್ದುಪಡಿ) ವಿಧೇಯಕ, 2023(ಬಿಲ್ ಸಂಖ್ಯೆ–26)<br>THE KARNATAKA SCHEDULED CASTES SUB-ALLOCATION AND TRIBAL SUB-ALLOCATION (PLANNING, ALLOCATION AND UTILIZATION OF FINANCIAL RESOURCES) (AMENDMENT) BILL, 2023 (LA Bill No.26) | 03.02.2024 | **ರಾಜ್ಯಪಾಲರು** |

| | | | |
|---|---|---|---|
| 7 | ಶ್ರೀ ರೇಣುಕಾ ಯಲ್ಲಮ್ಮ ಕ್ಷೇತ್ರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ವಿಧೇಯಕ, 2023 (ಬಿಲ್ ಸಂಖ್ಯೆ–25)<br>SHREE RENUKA YELLAMMA KSHETRA TOURISM DEVELOPMENT BOARD BILL, 2023 (LA Bill No. 25) | 03.02.2024 | **ರಾಜ್ಯಪಾಲರು** |
| 8 | ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ, 2023 (ಬಿಲ್ ಸಂ.23)<br>THE KARNATAKA STAMP (AMENDMENT) BILL,2023 (LA Bill No.22) | 03.02.2024 | **ರಾಜ್ಯಪಾಲರು** |

## 4. ಸಭೆಯ ಮುಂದಿಡಲಾಗುವ ಕಾಗದ ಪತ್ರ

ಮಾನ್ಯ ಸಭಾನಾಯಕರು ಹಾಗೂ ಸಂಬಂಧಪಟ್ಟ ಸಚಿವರು ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ ಒಂದನೇ ಮತ್ತು ಎರಡನೇ ಪಟ್ಟಿಯನ್ನು ಸದನದಲ್ಲಿ ಮಂಡಿಸಿದರು.

## 5. ಶೂನ್ಯ ವೇಳೆ ಪ್ರಸ್ತಾವಗಳು

1. **ಶ್ರೀ ಎಸ್.ವ್ಹಿ. ಸಂಕನೂರ** ಅವರು ರಾಣೇಬೆನ್ನೂರು ಕೃಷಿ ಉತ್ಪನ್ನ ಮಾರುಕಟ್ಟೆಯ ವರ್ತಕರ ಸಂಘದವರು ಮಾರುಕಟ್ಟೆ ಪ್ರಾಂಗಣದ ನಿವೇಶನ ಹಂಚಿಕೆ ಬಗ್ಗೆ ಪತ್ರಿಕೆಯಲ್ಲಿ ಪ್ರಕಟಿಸಿರುವ ಕರಾರುಗಳನ್ನು ವಿರೋಧಿಸಿ ಧರಣಿ ನಡೆಸುತ್ತಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಉತ್ತರಿಸಿದರು.

2. **ಶ್ರೀ ಸಿ.ಎನ್. ಮಂಜೇಗೌಡ** ಅವರು ರಾಜ್ಯದಲ್ಲಿನ ಅಂಗನವಾಡಿಗಳಲ್ಲಿ ಮಕ್ಕಳಿಗೆ, ಗರ್ಭಿಣಿಯರಿಗೆ ಹಾಗೂ ಬಾಣಂತಿಯರಿಗೆ ಪೌಷ್ಠಿಕಾಂಶದ ಆಹಾರ ಪದಾರ್ಥಗಳನ್ನು ಪೂರೈಸದಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ

ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಡಿ.ಎಸ್. ಅರುಣ್** ಅವರು ಗ್ರಾಮ ಪಂಚಾಯತಿಗಳು ಸ್ವಯಂ ಸರ್ಕಾರಗಳಾಗಿ ಕಾರ್ಯನಿರ್ವಹಿಸಲು ಅಗತ್ಯವಿರುವ ಕ್ರಮಗಳನ್ನು ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ಎಂ. ನಾಗರಾಜು** ಅವರು ಉತ್ತರ ಕರ್ನಾಟಕದಲ್ಲಿ ಕ್ಯಾನ್ಸರ್ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವ ಕಾರಣ, ಮತ್ತಷ್ಟು ಕ್ಯಾನ್ಸರ್ ಆಸ್ಪತ್ರೆಗಳನ್ನು ನಿರ್ಮಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ಮಂಜುನಾಥ್ ಭಂಡಾರಿ** ಅವರು ರಾಜ್ಯದಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸುಮಾರು 1500 ಬಿಲ್ ಕಲೆಕ್ಟರ್ ಹುದ್ದೆಗಳು ಖಾಲಿ ಇರುವುದರಿಂದ 2024–25ನೇ ಸಾಲಿನಿಂದ ಡಿಜಿಟಲ್ ತೆರಿಗೆ ಪಾವತಿ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ರಾಜ್ಯದಲ್ಲಿ ದ್ರಾಕ್ಷಿ ಬೆಳೆಗಳಿಗೆ ಶ್ವೇತ್ಯಾಗಾರ ಹಾಗೂ ಬೆಳೆಗಾರರಿಗೆ ಇತರೆ ನೆರವು ನೀಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕೃಷಿ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀ ಪಿ.ಹೆಚ್. ಪೂಜಾರ್** ಅವರು ರಾಜ್ಯದಲ್ಲಿನ ಜಲಾಶಯಗಳ ನೀರಿನ ಮಟ್ಟ ಇಳಿಮುಖವಾಗುತ್ತಿದ್ದು, ನೀರಿನ ಅಭಾವವನ್ನು ಶೀಘ್ರವಾಗಿ ಪರಿಹರಿಸಿ, ನೀರಿನ ವ್ಯವಸ್ಥೆ ಕಲ್ಪಿಸಿಕೊಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀಮತಿ ಹೇಮಲತಾ ನಾಯಕ್** ಅವರು ಕೆ.ಪಿ.ಟಿ.ಸಿ.ಎಲ್ ಮತ್ತು ಕೆ.ಪಿ.ಸಿ.ಎಲ್. ಉದ್ಯೋಗಿಗಳಿಗೆ ಎರಡು ವರ್ಷಗಳಿಂದ ಬಾಕಿ ಇರುವ ಪಿಂಚಣಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ ಪ್ರಸ್ತಾಪಿಸಿದರು.

ಮಾನ್ಯ ಸಮಾಜ ಕಲ್ಯಾಣ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಎಸ್. ರುದ್ರೇಗೌಡ** ಅವರುಗಳು ಶಿವಮೊಗ್ಗ ನಗರ ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿ ಅಧಿಕಾರಿ/ನೌಕರರ ಕೊರತೆಯಿಂದಾಗಿ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿರುವ ಬಗ್ಗೆ ಪ್ರಸ್ತಾಪಿಸಿದರು.

ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. **ಶ್ರೀ ಕೇಶವ ಪ್ರಸಾದ್ ಎಸ್** ಅವರು ಬಿಳಿಗಿರಿ ರಂಗನ ಬೆಟ್ಟದಲ್ಲಿ ಕಿಡಿಗೇಡಿಗಳು ಬೆಂಕಿ ಹಚ್ಚಿದ ಪರಿಣಾಮ ಸುಮಾರು 50 ಎಕರೆಗೂ ಹೆಚ್ಚು ಸಸ್ಯರಾಶಿ ನಾಶವಾಗಿದ್ದು, ಅವರುಗಳ ವಿರುದ್ಧ ಕಠಿಣ ಕ್ರಮ ಕೈಗೊಂಡು ಅರಣ್ಯವನ್ನು ಸಂರಕ್ಷಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

11. **ಶ್ರೀ ಎನ್. ರವಿಕುಮಾರ್** ಅವರು ಬೆಳಗಾವಿ ಜಿಲ್ಲೆಯ ಖಾನಾಪುರ ತಾಲ್ಲೂಕಿನಲ್ಲಿ ಯುವಕನೊಬ್ಬ ಹಸಿವಿನಿಂದ ಮೃತಪಟ್ಟಿರುವ ಬಗ್ಗೆ ಪತ್ರಿಕೆಗಳಲ್ಲಿ ಪ್ರಕಟವಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಉತ್ತರಿಸಿದರು.

**6. ನಿಯಮ 330ರ ಮೇರೆಗೆ**

1. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಮಧು ಜಿ. ಮಾದೇಗೌಡ ಹಾಗೂ ಎಸ್.ಎಲ್. ಭೋಜೇಗೌಡ** ಅವರುಗಳು ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ, ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜುಗಳಿಗೆ ಬಡ್ತಿ ಪಡೆದ ಶಿಕ್ಷಕರು ಹಾಗೂ ಉಪನ್ಯಾಸಕರಿಗೆ 6ನೇ ವೇತನಆಯೋಗದ ವರದಿ ಅನ್ವಯ ಬಡ್ತಿ ಪಡೆಯದಿರುವವರಿಗೆ 15, 20, 25 ವರ್ಷಗಳ ಕಾಲಮಿತಿ ಬಡ್ತಿ, 20, 25 ವರ್ಷಗಳ ಸ್ವಯಂಚಾಲಿತ ವೇತನ ಬಡ್ತಿಗಳನ್ನು ಮಂಜೂರು ಮಾಡದಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆಯ ಕುರಿತು ಪ್ರಸ್ತಾಪಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಎಸ್.ಎಲ್. ಭೋಜೇಗೌಡ
2. ಶ್ರೀ ಮಧು ಜಿ. ಮಾದೇಗೌಡ
3. ಶ್ರೀ ಎಸ್.ವ್ಹಿ. ಸಂಕನೂರ

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖಾ ಸಚಿವರು ಉತ್ತರಿಸಿದರು.

ಮಾನ್ಯ ಶಾಸಕರಾದ ಶ್ರೀ ಮರಿತಿಬ್ಬೇಗೌಡ ಅವರು ಸ್ಪಷ್ಟೀಕರಣ ಕೋರಿದರು.

ಮಾನ್ಯ ಸಚಿವರು ಸ್ಪಷ್ಟೀಕರಣ ನೀಡಿದರು.

**7. ಗಮನ ಸೆಳೆಯುವ ಸೂಚನೆ**

1. **ಶ್ರೀ ಅ. ದೇವೇಗೌಡ** ಅವರು ರಾಜ್ಯದಲ್ಲಿರುವ ಕಾಲೇಜು ಶಿಕ್ಷಣ ಇಲಾಖೆಯಡಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸೇವೆಯನ್ನು

ಖಾಯಂಗೊಳಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆದರು.

ಮಾನ್ಯ ಉನ್ನತ ಶಿಕ್ಷಣ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಎಂ. ಚಿದಾನಂದಗೌಡ
2. ಶ್ರೀ ಎಸ್.ವ್ಹಿ. ಸಂಕನೂರ
3. ಶ್ರೀ ಎನ್. ರವಿಕುಮಾರ್
4. ಶ್ರೀ ಎಸ್.ಎಲ್. ಭೋಜೇಗೌಡ
5. ಶ್ರೀ ಡಿ.ಎಸ್. ಅರುಣ್
6. ಶ್ರೀ ಮರಿತಿಬ್ಬೇಗೌಡ

ಮಾನ್ಯ ಉನ್ನತ ಶಿಕ್ಷಣ ಸಚಿವರು ಸ್ಪಷ್ಟೀಕರಣ ನೀಡಿದರು.

ಮಧ್ಯಾಹ್ನ 2.20 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.40 ಗಂಟೆಗೆ ಮಾನ್ಯ ಸಭಾಪತಿಯವರ **(ಬಸವರಾಜು ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**ನಿಯಮ 330ರ ಮೇರೆಗೆ**

1. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ಕಲಬುರಗಿಯಲ್ಲಿ ನಿರಂತರ ನೀರು ಸರಬರಾಜು ಯೋಜನೆಯಡಿ ಅಳವಡಿಸಿರುವ ಪೈಪ್‌ಗಳು ಅತ್ಯಂತ ಕಳಪೆ ಗುಣಮಟ್ಟದಿಂದ ಕೂಡಿದ್ದು, ಇದುವರೆವಿಗೂ ಈ ಯೋಜನೆಯಡಿಯಲ್ಲಿ ಸಾರ್ವಜನಿಕರಿಗೆ ನೀರಿನ ಸಂಪರ್ಕ ಕಲ್ಪಿಸದಿರುವ ಕುರಿತು ಪ್ರಸ್ತಾಪಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಕೇಶವ ಪ್ರಸಾದ್ ಎಸ್
2. ಶ್ರೀಮತಿ ಹೇಮಲತಾ ನಾಯಕ್

ಮಾನ್ಯ ಸಭಾನಾಯಕರು ಉತ್ತರಿಸಿದರು.

ಈ ಕೆಳಕಂಡ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ
2. ಶ್ರೀ ಪಿ.ಹೆಚ್. ಪೂಜಾರ್

ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಸ್ಪಷ್ಟೀಕರಣ ನೀಡಿದರು.

**ಅಭಿನಂದನಾ ಪ್ರಸ್ತಾವ**

ಶ್ರೀ ಬಿ.ಕೆ. ಹರಿಪ್ರಸಾದ್ ಅವರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

**ಅಭಿನಂದನಾ ನಿರ್ಣಯ**

ಕಳೆದ ನಾಲ್ಕು ದಶಕಗಳಿಗಿಂತಲೂ ಹೆಚ್ಚು ಕಾಲ ಕರ್ನಾಟಕದ ಸಾರ್ವಜನಿಕ ಹಾಗೂ ಶೈಕ್ಷಣಿಕ ವಲಯದಲ್ಲಿ ಅಪ್ರತಿಮ ಸಾಧನೆಗೈದ ಏಕೈಕ ಕನ್ನಡಿಗ ಹಾಗೂ ಒಂದೇ ಕ್ಷೇತ್ರದಿಂದ ಸತತ ಎಂಟು ಬಾರಿ ಆಯ್ಕೆಯಾಗಿ ವಿಶ್ವ ದಾಖಲೆ ನಿರ್ಮಿಸಿ ಕಳೆದ 43 ವರ್ಷಗಳಿಂದ ವಿಧಾನ ಪರಿಷತ್ತಿನಲ್ಲಿ ಶಿಕ್ಷಕರ ಹಿತ ಕಾಯುವಲ್ಲಿ ಶ್ರಮಿಸುತ್ತಿರುವ ಸಭಾಪತಿ ಮಾನ್ಯ ಶ್ರೀ ಬಸವರಾಜ ಹೊರಟ್ಟಿ ಅವರ ಮುಡಿಗೆ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ದಾಖಲೆಯ ಗರಿ ಸೇರ್ಪಡೆಯಾಗಿರುವುದಕ್ಕಾಗಿ ಸದನವು ಸರ್ವಾನುಮತದಿಂದ ಹಾಗೂ ಅಭಿಮಾನದಿಂದ ಮಾನ್ಯ ಸಭಾಪತಿ ಶ್ರೀ ಬಸವರಾಜ ಹೊರಟ್ಟಿ ಅವರಿಗೆ ಅಭಿನಂದನೆಯನ್ನು ಸಲ್ಲಿಸುತ್ತದೆ.

ಈ ಕೆಳಕಂಡ ಶಾಸಕರುಗಳು ಭಾಗವಹಿಸಿದರು.

1. ಶ್ರೀ ಯು.ಬಿ. ವೆಂಕಟೇಶ್
2. ಶ್ರೀ ಸಲೀಂ ಅಹಮದ್

3. ಶ್ರೀ ಕೇಶವ ಪ್ರಸಾದ್ ಎಸ್

4. ಶ್ರೀಮತಿ ಭಾರತಿ ಶೆಟ್ಟಿ

5. ಶ್ರೀಮತಿ ಹೇಮಲತಾ ನಾಯಕ್

6. ಶ್ರೀಮತಿ ಉಮಾಶ್ರೀ

7. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.

8. ಶ್ರೀ ಅ. ದೇವೇಗೌಡ

9. ಶ್ರೀ ಗೋವಿಂದರಾಜು

10. ಶ್ರೀ ಎನ್. ರವಿಕುಮಾರ್

11. ಶ್ರೀ ಎನ್. ಚಲುವರಾಯಸ್ವಾಮಿ, ಮಾನ್ಯ ಕೃಷಿ ಸಚಿವರು

12. ಶ್ರೀ ಪಿ.ಹೆಚ್. ಪೂಜಾರ್

13. ಶ್ರೀ ಎಂ.ಕೆ. ಪ್ರಾಣೇಶ್

14. ಶ್ರೀ ಪ್ರದೀಪ್ ಶೆಟ್ಟರ್

15. ಶ್ರೀ ಎಂ. ನಾಗರಾಜು

16. ಶ್ರೀ ಈಶ್ವರ್ ಖಂಡ್ರೆ, ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು

17. ಶ್ರೀ ಡಿ.ಎಸ್. ಅರುಣ್

18. ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ

19. ಶ್ರೀ ಕೋಟ ಶ್ರೀನಿವಾಸ ಪೂಜಾರಿ, ಮಾನ್ಯ ವಿರೋಧ ಪಕ್ಷದ ನಾಯಕರು

20. ಶ್ರೀ ಎಸ್.ವ್ಹಿ. ಸಂಕನೂರ

21. ಶ್ರೀ ಕೆ.ಎ. ತಿಪ್ಪೇಸ್ವಾಮಿ

ಮಾನ್ಯ ಸಭಾನಾಯಕರು ಅಭಿನಂದನೆ ಸಲ್ಲಿಸಿದರು.

ಅಭಿನಂದನಾ ಪ್ರಸ್ತಾವಕ್ಕೆ ಮಾನ್ಯ ಸಭಾಪತಿಯವರು ಕೃತಜ್ಞತೆಯನ್ನು ಸಲ್ಲಿಸಿದರು.

**ನಿಯಮ 330ರ ಮೇರೆಗೆ**

2. **ಶ್ರೀ ಎಸ್. ರವಿ** ಅವರು ರಾಮನಗರ ಜಿಲ್ಲೆಯ ವ್ಯಾಪ್ತಿಗೆ ಒಳಪಡುವ ರಾಮನಗರ ಪ್ರಾದೇಶಿಕ ವಿಭಾಗ, ಕಾವೇರಿ ವನ್ಯಜೀವಿ ವಿಭಾಗ, ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ ವಿಭಾಗಗಳಲ್ಲಿ ಕಾಡಾನೆಗಳ ದಾಳಿಯಿಂದಾಗಿ ಜೀವಹಾನಿ ಹಾಗೂ ರೈತರ ಬೆಳೆಗಳಿಗೆ ಅಪಾರ ನಷ್ಟ ಉಂಟಾಗಿರುವ ಕುರಿತು ಪ್ರಸ್ತಾಪಿಸಿದರು.

ಸಂಜೆ 6.25 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಉತ್ತರಿಸಿದರು.

**ಗಮನ ಸೆಳೆಯುವ ಸೂಚನೆ**

2. **ಶ್ರೀ ಯು.ಬಿ. ವೆಂಕಟೇಶ್** ಅವರು ಉಡುಪಿ ಜಿಲ್ಲೆ ಕಾರ್ಕಳ ತಾಲ್ಲೂಕಿನ ಎರ್ಲಪಾಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೈಲೂರು ಉಮಿಕಲ್ ಬೆಟ್ಟದಲ್ಲಿ ನಿರ್ಮಿಸಲಾದ ದೋಷಪೂರಿತ ಪರಶುರಾಮ ವಿಗ್ರಹ ಅವಶೇಷಗಳನ್ನು ತೆರವುಗೊಳಿಸಿ ಸಮುದ್ರಕ್ಕೆ ಎಸೆದಿರುವ ಪ್ರಕರಣದ ಬಗ್ಗೆ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆದರು.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಉತ್ತರಿಸಿದರು.

ಸಂಜೆ 7.05 ಗಂಟೆಗೆ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪೀಠದಲ್ಲಿ ಆಸೀನರಾದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀಮತಿ ಭಾರತಿ ಶೆಟ್ಟಿ
2. ಶ್ರೀ ಯು.ಬಿ. ವೆಂಕಟೇಶ್
3. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಸ್ಪಷ್ಟೀಕರಣ ನೀಡಿದರು.

3. **ಶ್ರೀ ಗೋವಿಂದರಾಜು** ಅವರು ಕೋಲಾರ ನಗರದಲ್ಲಿರುವ ದೇವರಾಜ್ ಅರಸು ಎಜುಕೇಶನ್ ಟ್ರಸ್ಟ್‌ನಿಂದ ನಡೆಯುತ್ತಿರುವ ಆರ್.ಎಲ್. ಜಾಲಪ್ಪ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯು ಕಳೆದ 2002ನೇ ಸಾಲಿನಿಂದ ಇಲ್ಲಿಯವರೆಗೆ ಆಸ್ತಿ ತೆರಿಗೆಯನ್ನು ಪೂರ್ಣ ಪ್ರಮಾಣದಲ್ಲಿ ಪಾವತಿಸದಿರುವ ಬಗ್ಗೆ ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರ ಗಮನ ಸೆಳೆದರು.

ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಉತ್ತರಿಸಿದರು.

ಮಾನ್ಯ ಶಾಸಕರು ಸ್ಪಷ್ಟೀಕರಣ ಕೋರಿದರು.

ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಸ್ಪಷ್ಟೀಕರಣ ನೀಡಿದರು.

4. **ಶ್ರೀ ಕೆ. ಹರೀಶ್‌ಕುಮಾರ್** ಅವರು ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ರೈತರು ಹಾಗೂ ಬೆಳೆಗಾರರಿಗೆ ತರಬೇತಿ ನೀಡುವ ಸಲುವಾಗಿ ಬೆಳ್ತಂಗಡಿ ತಾಲ್ಲೂಕಿನಲ್ಲಿ ಸ್ಥಾಪಿಸಲಾದ ಕೃಷಿ ರೈತ ತರಬೇತಿ ಕೇಂದ್ರವು ಮೂಲಸೌಲಭ್ಯಗಳ ಕೊರತೆಯಿಂದಾಗಿ ನಿಷ್ಕ್ರಿಯೆಗೊಂಡಿರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆದರು.

ಮಾನ್ಯ ಸಭಾನಾಯಕರು ಉತ್ತರಿಸಿದರು.

ಮಾನ್ಯ ಶಾಸಕರು ಸ್ಪಷ್ಟೀಕರಣ ಕೋರಿದರು.

ಮಾನ್ಯ ಸಭಾನಾಯಕರು ಸ್ಪಷ್ಟೀಕರಣ ನೀಡಿದರು.

## 8. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2024ನೇ ಫೆಬ್ರವರಿ 12ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು

ರಾಜ್ಯಪಾಲರಿಗೆ ಕೃತಜ್ಞತಾ ಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ ಎಂದು ಶ್ರೀ ಯು.ಬಿ. ವೆಂಕಟೇಶ್ ಅವರು ಸೂಚಿಸಿದ್ದು, ಶ್ರೀಮತಿ ಉಮಾಶ್ರೀ ಅವರು ಪ್ರಸ್ತಾವವನ್ನು ಅನುಮೋದಿಸಿದರು.

ಸಂಜೆ 7.45 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:14.02.2024ರಂದು ಬೆಳಗ್ಗೆ 10.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

# **ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತೆರಡನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಬುಧವಾರ, ದಿನಾಂಕ:14.02.2024**

(03)

ಸದನವು ಬೆಳಗ್ಗೆ: 10.05 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## **1. ಪ್ರಶ್ನೋತ್ತರ**

ದಿನಾಂಕ:14.02.2024ರಂದು ಸದನದಲ್ಲಿ ಉತ್ತರಿಸುವ ಸಮೂಹ–IIIರ 2ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 16(167)
2. 17(166) ಗೈರು ಹಾಜರಿ
3. 18(200) ವರ್ಗಾವಣೆ
4. 19(110)
5. 20(216) ತಡೆಹಿಡಿಯಲಾಯಿತು
6. 21(145)
7. 22(158) ಗೈರು ಹಾಜರಿ
8. 23(153) ತಡೆಹಿಡಿಯಲಾಯಿತು
9. 24(105) ತಡೆಹಿಡಿಯಲಾಯಿತು
10. 25(169)

11. 26(103) ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ಪರವಾಗಿ ಶ್ರೀ ಕೇಶವ ಪ್ರಸಾದ್ ಎಸ್

12. 27(213)

13. 28(129) ಗೈರು ಹಾಜರಿ

14. 29(122) ಶ್ರೀ ಎಸ್. ರವಿ ಪರವಾಗಿ ಶ್ರೀ ಯು.ಬಿ. ವೆಂಟೇಶ್

15. 30(130) ತಡೆಹಿಡಿಯಲಾಯಿತು

ದಿನಾಂಕ:14.02.2024ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIIರ 2ನೇ ಪಟ್ಟಿಯ ಒಟ್ಟು 113 ಪ್ರಶ್ನೆಗಳ ಪೈಕಿ **71** ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

### 2. ಸಭೆಯ ಮುಂದಿಡಲಾಗುವ ಕಾಗದ ಪತ್ರ

ಭಾರತದ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 2022–23ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳನ್ನು (ಸಂಪುಟ–I ಮತ್ತು II) ಮಾನ್ಯ ಸಭಾನಾಯಕರು ಮಂಡಿಸಿದರು.

### 3. ವರದಿಯನ್ನೊಪ್ಪಿಸುವುದು

ಕರ್ನಾಟಕ ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ **ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2023**ನ್ನು ಪರಿಶೀಲಿಸಿ ವರದಿ ಸಲ್ಲಿಸಲು ರಚಿಸಲಾಗಿರುವ ಪರಿಶೀಲನಾ ಸಮಿತಿಯ ವರದಿಯನ್ನು ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರ ಪರವಾಗಿ ಮಾನ್ಯ ಸಭಾನಾಯಕರು ಒಪ್ಪಿಸಿದರು.

**4. ಶೂನ್ಯವೇಳೆ ಪ್ರಸ್ತಾವಗಳು**

1. **ಶ್ರೀ ವೈ.ಎಂ. ಸತೀಶ್** ಅವರು ರಾಜ್ಯದಲ್ಲಿ ಅಂಗವಿಕಲರಿಗೆ ಆರೋಗ್ಯ ಇಲಾಖೆಯ ವತಿಯಿಂದ ಗುರುತಿನ ಚೀಟಿ ತಲುಪಿಸಲು ಯೋಜನೆಯನ್ನು ರೂಪಿಸುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಹೆಚ್.ಎಸ್. ಗೋಪಿನಾಥ್** ಅವರು ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು ಪಿ.ಹೆಚ್.ಡಿ. ಪ್ರವೇಶಾತಿಗೆ ಶೀಘ್ರವಾಗಿ ಪರೀಕ್ಷೆಯನ್ನು ನಡೆಸುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಉನ್ನತ ಶಿಕ್ಷಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಕೆ. ಹರೀಶ್ ಕುಮಾರ್** ಅವರು ಮಂಗಳೂರಿನಿಂದ ಲಕ್ಷದ್ವೀಪ ಕೇಂದ್ರಾಡಳಿತ ಪ್ರದೇಶಕ್ಕೆ ಪ್ರವಾಸ ಕೈಗೊಳ್ಳುವವರಿಗೆ ಸೂಕ್ತ ಸಂಪರ್ಕ ವ್ಯವಸ್ಥೆ ಕಲ್ಪಿಸಲು ನಿಯಮಗಳನ್ನು ಸರಳೀಕರಣಗೊಳಿಸಲು ಕೇಂದ್ರ ಸರ್ಕಾರದೊಂದಿಗೆ ಮಾತುಕತೆ ನಡೆಸುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀಮತಿ ಹೇಮಲತಾ ನಾಯಕ್** ಅವರು ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಸತಿ ನಿಲಯಗಳಲ್ಲಿ ಸೂಕ್ತ ಸಿಬ್ಬಂದಿ ಮತ್ತು ಸೌಲಭ್ಯಗಳ ಕೊರತೆಯಿಂದಾಗಿ ವಿದ್ಯಾರ್ಥಿಗಳಿಗೆ ಅನಾನುಕೂಲವಾಗುತ್ತಿದ್ದು, ಕೂಡಲೇ ತಹಶೀಲ್ದಾರ್, ಉಪ ವಿಭಾಗಾಧಿಕಾರಿಗಳು ಅನಿರೀಕ್ಷಿತ ಭೇಟಿ ನೀಡಿ ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

    ಮಾನ್ಯ ಸಮಾಜ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

**5. ನಿಲುವಳಿ ಸೂಚನೆ**

ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿ ಹಾಗೂ ಇತರರು ರಾಜ್ಯದಲ್ಲಿ ಕೊಲೆ, ಕೋಮು ಗಲಭೆ, ಮಾರಣಾಂತಿಕ ಹಲ್ಲೆ ಪ್ರಕರಣಗಳು ನಡೆಯುತ್ತಿದ್ದು, ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ವಿಫಲವಾಗಿರುವ ಬಗ್ಗೆ ನಿಯಮ 59ರಡಿ ಪ್ರಸ್ತಾಪಿಸಲು ಅನುಮತಿ ಕೋರಿದರು.

ನಿಯಮ 72ರಡಿ ಚರ್ಚಿಸಲು ಅವಕಾಶ ನೀಡಿರುವುದಾಗಿ ಮಾನ್ಯ ಸಭಾಪತಿಯವರು ಪ್ರಕಟಿಸಿದರು.

**06. ಗಮನ ಸೆಳೆಯುವ ಸೂಚನೆ**

1. **ಡಾ: ತಳವಾರ್ ಸಾಬಣ್ಣ** ಅವರು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಅಧ್ಯಯನ ಪೀಠಗಳಲ್ಲಿ ಪ್ರಸ್ತುತವಿರುವ ಶೈಕ್ಷಣಿಕ ಸ್ಥಿತಿ, ಕಾರ್ಯವೈಖರಿ, ಹಣಕಾಸಿನ ವ್ಯವಸ್ಥೆ, ಸಾಮಾಜಿಕ ಮತ್ತು ಶೈಕ್ಷಣಿಕ ಕ್ಷೇತ್ರಕ್ಕೆ ನೀಡಿದ ಕೊಡುಗೆ ಹಾಗೂ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆದರು.

   ಮಾನ್ಯ ಉನ್ನತ ಶಿಕ್ಷಣ ಸಚಿವರ ಪರವಾಗಿ ಮಾನ್ಯ ಸಭಾನಾಯಕರು ಉತ್ತರಿಸಿದರು.

ಬೆಳಗ್ಗೆ 11.20 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ಮಾನ್ಯ ಶಾಸಕರಾದ ಡಾ: ತೇಜಸ್ವಿನಿಗೌಡ ಅವರು ಸ್ಪಷ್ಟೀಕರಣ ಕೋರಿದರು.

ಮಾನ್ಯ ಸಭಾನಾಯಕರು ಸ್ಪಷ್ಟೀಕರಣ ನೀಡಿದರು.

2. **ಶ್ರೀ ಶಾಂತಾರಾಮ್ ಬುಡ್ನ** ಸಿದ್ದಿ ಅವರು ಧಾರವಾಡ, ಬೆಳಗಾವಿ, ಉತ್ತರ ಕನ್ನಡ, ಶಿವಮೊಗ್ಗ ಮತ್ತು ಭದ್ರಾವತಿ ಜಿಲ್ಲೆಗಳಲ್ಲಿ ಕಾಡು ಮತ್ತು ಕಾಡಂಚಿನಲ್ಲಿ ವಾಸ ಮಾಡುತ್ತಿರುವ ದನಗರ ಗೌಳಿ ಜನಾಂಗದ ಹೈನುಗಾರಿಕೆ ವೃತ್ತಿಯನ್ನು ಪ್ರೋತ್ಸಾಹಿಸಿ ಬೇಸಿಗೆ

ಸಮಯದಲ್ಲಿ ಮೇವು ಸಿಗುವಂತೆ ಯೋಜನೆ ರೂಪಿಸಿ ಅನುಕೂಲ ಮಾಡಿಕೊಡುವ ಕುರಿತು ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರ ಗಮನ ಸೆಳೆದರು.

ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರ ಪರವಾಗಿ ಮಾನ್ಯ ಕಂದಾಯ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಕೆ.ಎಸ್. ನವೀನ್
2. ಶ್ರೀ ಸಿ.ಎನ್. ಮಂಜೇಗೌಡ

ಮಾನ್ಯ ಕಂದಾಯ ಸಚಿವರು ಸ್ಪಷ್ಟೀಕರಣ ನೀಡಿದರು.

3. **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ವ್ಯಾಪ್ತಿಯಲ್ಲಿ ಸಾರ್ವಜನಿಕ ಮಹತ್ವದ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಆಗದಿರುವುದರಿಂದ ಕಾಮಗಾರಿ ಕೈಗೊಳ್ಳುವಲ್ಲಿ ಹಿನ್ನಡೆಯಾಗಿರುವ ಬಗ್ಗೆ ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆದರು.

ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರ ಪರವಾಗಿ ಮಾನ್ಯ ಸಭಾನಾಯಕರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಎಂ.ಎಲ್. ಅನಿಲ್ ಕುಮಾರ್
2. ಶ್ರೀ ಕೆ.ಎ. ತಿಪ್ಪೇಸ್ವಾಮಿ,
3. ಶ್ರೀ ರಾಜೇಂದ್ರ ರಾಜಣ್ಣ
4. ಶ್ರೀ ಎಸ್.ಎಲ್. ಭೋಜೇಗೌಡ
5. ಶ್ರೀ ಕೆ.ಎಸ್. ನವೀನ್

6. ಶ್ರೀ ಎಂ.ಆರ್. ಸೀತಾರಾಂ

7. ಶ್ರೀ ಡಿ.ಎಸ್. ಅರುಣ್

ಮಾನ್ಯ ಸಭಾನಾಯಕರು ಸ್ಪಷ್ಟೀಕರಣ ನೀಡಿದರು.

**7. ನಿಯಮ 330ರ ಮೇರೆಗೆ**

**1.** **ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರು ವಿಶ್ವಕರ್ಮ ಸಮಾಜದ 4 ಕುಲದೇವರುಗಳಾದ ಬೆಳಗಾವಿ ಜಿಲ್ಲೆಯ ಸಿರಸಂಗಿ ಕಾಳಿಕಾದೇವಿ ದೇವಸ್ಥಾನ, ಯಾದಗಿರಿ ಜಿಲ್ಲೆಯ ತಿಂತಣಿ ಮೌನೇಶ್ವರ ದೇವಸ್ಥಾನ, ಚಾಮರಾಜನಗರ ಜಿಲ್ಲೆಯ ಚಿಕ್ಕಲ್ಲೂರಿನ ಸಿದ್ದಪ್ಪಾಜಿ ದೇವಾಲಯ ಹಾಗೂ ಚಿಕ್ಕಬಳ್ಳಾಪುರದ ಕಾಲಜ್ಞಾನಿ ವೀರಬ್ರಮ್ಹೇಂದ್ರ ಸ್ವಾಮಿಯವರ ದೇವಾಲಯ–ಪಾಪಾಗ್ನಿ ಮಠ ಈ ನಾಲ್ಕು ಐತಿಹಾಸಿಕ ಧಾರ್ಮಿಕ ಕ್ಷೇತ್ರಗಳನ್ನು ಒಟ್ಟುಗೂಡಿಸಿ ಪ್ರಾಧಿಕಾರವನ್ನಾಗಿ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಸಕರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಅವರು ಚರ್ಚೆಯಲ್ಲಿ ಭಾಗವಹಿಸಿದರು.

ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಉತ್ತರಿಸಿದರು.

**2.** **ಶ್ರೀ ಮಂಜುನಾಥ್ ಭಂಡಾರಿ** ಅವರು ಸಂವಿಧಾನದ ಆಶಯದಂತೆ ಗ್ರಾಮ ಪಂಚಾಯತಿಗಳು, ತಾಲ್ಲೂಕು ಪಂಚಾಯತಿಗಳು ಹಾಗೂ ಜಿಲ್ಲಾ ಪಂಚಾಯತಿಗಳು ಸ್ಥಳೀಯ ಸರ್ಕಾರಗಳಾಗಿ ಕೆಲಸ ಮಾಡುವ ದೃಷ್ಠಿಯಿಂದ ಈಗಾಗಲೇ ರೂಪಿಸಿರುವ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾನೂನಿನಲ್ಲಿರುವ ಎಲ್ಲಾ ಅಧಿಕಾರಗಳನ್ನು ಹಾಗೂ ಹಣಕಾಸನ್ನು ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರಿಸುವ ಕುರಿತು ಪ್ರಸ್ತಾಪಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಡಿ.ಎಸ್. ಅರುಣ್

2. ಶ್ರೀ ಕೆ.ಎಸ್. ನವೀನ್

3. ಶ್ರೀ ಸಿ.ಎನ್. ಮಂಜೇಗೌಡ

4. ಶ್ರೀ ಎಂ.ಎಲ್. ಅನಿಲ್ ಕುಮಾರ್

5. ಶ್ರೀ ಕೇಶವ ಪ್ರಸಾದ್ ಎಸ್

6. ಶ್ರೀ ಹೆಚ್.ಎಸ್. ಗೋಪಿನಾಥ್

ಮಧ್ಯಾಹ್ನ 2.15 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.45 ಗಂಟೆಗೆ ಮಾನ್ಯ ಉಪ ಸಭಾಪತಿಯವರ **(ಶ್ರೀ ಎಂ.ಕೆ. ಪ್ರಾಣೇಶ್)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

### "ಗದ್ದಲ"

ಮಾನ್ಯ ವಿರೋಧ ಪಕ್ಷದ ನಾಯಕರು ಕೆಳಮನೆಯ(ವಿಧಾನ ಸಭೆ) ಶಾಸಕರಿಗೆ ಬೆದರಿಕೆ ಕರೆ ಬಂದಿರುವ ಹಿನ್ನಲೆಯಲ್ಲಿ ಮಾನ್ಯ ಗೃಹ ಸಚಿವರು ಹೇಳಿಕೆ ನೀಡಬೇಕೆಂದು ಒತ್ತಾಯಿಸಿದರು.

ಈ ಸಂಬಂಧ ಕ್ರಮ ಕೈಗೊಂಡಿರುವುದಾಗಿ ಮಾನ್ಯ ಗೃಹ ಸಚಿವರು ತಿಳಿಸಿದರು.

### ನಿಯಮ 330ರ ಮೇರೆಗೆ

**ಶ್ರೀ ಮಂಜುನಾಥ್ ಭಂಡಾರಿ** ಅವರು ಸಂವಿಧಾನದ ಆಶಯದಂತೆ ಗ್ರಾಮ ಪಂಚಾಯತಿಗಳು, ತಾಲ್ಲೂಕು ಪಂಚಾಯತಿಗಳು ಹಾಗೂ ಜಿಲ್ಲಾ ಪಂಚಾಯತಿಗಳು ಸ್ಥಳೀಯ ಸರ್ಕಾರಗಳಾಗಿ ಕೆಲಸ ಮಾಡುವ ದೃಷ್ಠಿಯಿಂದ ಈಗಾಗಲೇ ರೂಪಿಸಿರುವ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್ ಕಾನೂನಿನಲ್ಲಿರುವ ಎಲ್ಲಾ ಅಧಿಕಾರಗಳನ್ನು ಹಾಗೂ ಹಣಕಾಸನ್ನು ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರಿಸುವ ಕುರಿತು ಚರ್ಚೆಯನ್ನು ಮುಂದುವರೆಸಿದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಸಿ.ಎನ್. ಮಂಜೇಗೌಡ,
2. ಶ್ರೀ ಡಿ.ಎಸ್. ಅರುಣ್,
3. ಶ್ರೀ ಎಸ್. ರುದ್ರೇಗೌಡ
4. ಶ್ರೀ ವೈ.ಎಂ. ಸತೀಶ್,
5. ಶ್ರೀ ಎಸ್. ರವಿ
6. ಶ್ರೀ ಕೆ.ಎಸ್. ನವೀನ್

ಮಧ್ಯಾಹ್ನ 4.45 ಗಂಟೆಗೆ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪೀಠದಲ್ಲಿ ಆಸೀನರಾದರು.

## 8. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣೆ ಪ್ರಸ್ತಾವದ ಮೇಲಿನ ಚರ್ಚೆ

"2024ನೇ ಫೆಬ್ರವರಿ 12ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾ ಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ ಎಂದು ಶ್ರೀ ಯು.ಬಿ. ವೆಂಕಟೇಶ್ ಅವರು ಸೂಚಿಸಿದ್ದು, ಶ್ರೀಮತಿ ಉಮಾಶ್ರೀ ಅವರು ಅನುಮೋದಿಸಿದರು.

ಮಾನ್ಯ ಶಾಸಕರಾದ ಶ್ರೀ ಯು.ಬಿ. ವೆಂಕಟೇಶ್ ಅವರು ಚರ್ಚೆಯನ್ನು ಪ್ರಾರಂಭಿಸಿದರು.

ಸದನವನ್ನು ಸಂಜೆ 5.50 ಗಂಟೆಗೆ ಮುಂದೂಡಿ ದಿನಾಂಕ:15.02.2024ರಂದು ಬೆಳಗ್ಗೆ 10.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

*****

# **ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತೆರಡನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಗುರುವಾರ, ದಿನಾಂಕ:15.02.2024**

(04)

ಸದನವು ಬೆಳಗ್ಗೆ: 10.05 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## **1. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ**

ಶ್ರೀ ಯು.ಬಿ. ವೆಂಕಟೇಶ್ ಅವರು ತಮ್ಮ ಭಾಷಣವನ್ನು ಮುಂದುವರೆಸಿದರು.

2. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.

3. ಶ್ರೀ ಎಂ. ನಾಗರಾಜು

4. ಶ್ರೀ ಕೆ.ಎಸ್. ನವೀನ್

5. ಶ್ರೀ ಪಿ.ಹೆಚ್. ಪೂಜಾರ್

## **2. ಪ್ರಶ್ನೋತ್ತರ**

ದಿನಾಂಕ:15.02.2024ರಂದು ಸದನದಲ್ಲಿ ಉತ್ತರಿಸುವ ಸಮೂಹ–IVರ 3ನೇ ಪಟ್ಟಿಯ ಚು.ಗು.ಪ್ರ ಸಂಖ್ಯೆ 33(235)ಕ್ಕೆ ಉತ್ತರಿಸಲಾಯಿತು.

## **"ಗದ್ದಲ"**

ಬೆಳಗ್ಗೆ 11.45 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು (ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ) ಪ್ರಕಟಿಸಿದರು.

ಸದನವು ಮಧ್ಯಾಹ್ನ 1.00 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಪುನ: ಸಭೆ ಸೇರಿತು.

ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

| | | |
|---|---|---|
| 2 | 31(301) | |
| 3. | 35(431) | |
| 4. | 36(353) | |
| 5. | 37(246) | |
| 6. | 38(278) | |
| 7. | 39(335) | |
| 8. | 40(281) | |
| 9. | 41(305) | |
| 10. | 42(354) | |
| 11. | 43(273) | |
| 12. | 44(248) | |
| 13. | 45(326+286+287<br>272+439+294) | |
| 14. | 32(366) | ವರ್ಗಾವಣೆ |
| 15. | 34(257) | ವರ್ಗಾವಣೆ |

ದಿನಾಂಕ:14.02.2024ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IVರ 3ನೇ ಪಟ್ಟಿಯ ಒಟ್ಟು **120** ಪ್ರಶ್ನೆಗಳ ಪೈಕಿ **43** ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

ಮಾನ್ಯ ವಿರೋಧ ಪಕ್ಷದ ಶಾಸಕರುಗಳು ಮಾನ್ಯ ಮುಖ್ಯಮಂತ್ರಿಯವರು ಬಳಸಿದ ಪದಗಳಿಗೆ ವಿಷಾಧ ವ್ಯಕ್ತಪಡಿಸಬೇಕೆಂದು ತಿಳಿಸುತ್ತಾ ಸಭಾತ್ಯಾಗ ಮಾಡಿದರು.

ಮಧ್ಯಾಹ್ನ 1.35 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿಯವರ ಪೀಠದಲ್ಲಿ ಆಸೀನರಾದರು.

**ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ**

6. ಶ್ರೀ ಕೆ.ಎ. ತಿಪ್ಪೇಸ್ವಾಮಿ

ಮಧ್ಯಾಹ್ನ 2.05 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.15 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಪ್ರಕಟಿಸಿದರು.

ಮಧ್ಯಾಹ್ನ 3.45 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**3. ವರದಿಯನ್ನೊಪ್ಪಿಸುವುದು**

**ಶ್ರೀ ಎನ್. ರವಿಕುಮಾರ್** ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ರಾಜ್ಯದಲ್ಲಿರುವ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಕ್ಲಬ್‌ಗಳ ಕಾರ್ಯವೈಖರಿ ಮತ್ತು ಚಟುವಟಿಕೆಗಳ ಬಗ್ಗೆ ವಿಶೇಷ ಸದನ ಸಮಿತಿಯ ವರದಿಯನ್ನೊಪ್ಪಿಸಿದರು.

**ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ**

7. ಶ್ರೀ ಕೋಟ ಶ್ರೀನಿವಾಸ ಪೂಜಾರಿ

**4. ಪ್ರಕಟಣೆ**

**ಮಾನ್ಯ ಸಭಾಧ್ಯಕ್ಷರಿಂದ ಬಂದಿರುವ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ **104ನೇ ನಿಯಮದ** ಮೇರೆಗೆ ವಿಧಾನ ಸಭೆಯು **ದಿನಾಂಕ:15.02.2024**ರಂದು **"ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ವಿಧೇಯಕ, 2024"ನ್ನು** ಅಂಗೀಕರಿಸಿರುತ್ತದೆಂದು ಹಾಗೂ ಸದರಿ ವಿಧೇಯಕಕ್ಕೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

ಸದನವನ್ನು ಸಂಜೆ 6.08 ಗಂಟೆಗೆ ಮುಂದೂಡಿ ದಿನಾಂಕ:16.02.2024ರಂದು ಬೆಳಗ್ಗೆ 10.15 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು(**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

****

# **ಕರ್ನಾಟಕ ವಿಧಾನ ಪರಿಷತ್ತು**

ನೂರ ಐವತ್ತೆರಡನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಶುಕ್ರವಾರ, ದಿನಾಂಕ:16.02.2024**

(05)

ಸದನವು ಬೆಳಗ್ಗೆ: 10.20 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## **ಆಯವ್ಯಯ ಮಂಡನೆ**

2024–2025ನೇ ಸಾಲಿನ ಅಯವ್ಯಯ ಅಂದಾಜುಗಳನ್ನು ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಮಾನ್ಯ ಸಭಾನಾಯಕರು ಮಂಡಿಸಿದರು.

ಬೆಳಗ್ಗೆ 10.25 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:19.02.2024ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆರಡನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಸೋಮವಾರ, ದಿನಾಂಕ:19.02.2024

**(06)**

ದಿನಾಂಕ:19.02.2024 ರಂದು ಬೆಳಗ್ಗೆ 11.03 ಗಂಟೆಗೆ ಸದನವು ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**1. ಪ್ರಶ್ನೋತ್ತರ**

ದಿನಾಂಕ:19.02.2024ರಂದು ಸದನದಲ್ಲಿ ಉತ್ತರಿಸುವ ಸಮೂಹ-Iರ 4ನೇ ಪಟ್ಟಿಯ ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 46(409) | ಗೈರು ಹಾಜರಿ |
| 2. | 47(545) | ಗೈರು ಹಾಜರಿ |
| 3. | 48(414) | |
| 4. | 49(507) | |
| 5. | 50(533) | |
| 6. | 51(369) | ಗೈರು ಹಾಜರಿ |
| 7. | 52(425) | ಗೈರು ಹಾಜರಿ |
| 8. | 53(509) | |
| 9. | 54(454) | ಶ್ರೀ ಶಾಂತರಾಮ್ ಬುಡ್ನ ಸಿದ್ದಿ ಅವರ ಪರವಾಗಿ ಡಾ:ತಳವಾರ್ ಸಾಬಣ್ಣ |

10. 55(460)

11. 56(549) ಶ್ರೀ ಹೆಚ್.ಎಸ್. ಗೋಪಿನಾಥ್ ಅವರ ಪರವಾಗಿ ಶ್ರೀ ಡಿ.ಎಸ್. ಅರುಣ್

12. 57(481)

13. 58(443) ಶ್ರೀ ಅರವಿಂದ ಕುಮಾರ್ ಅರಳಿ ಅವರ ಪರವಾಗಿ ಶ್ರೀ ಯು.ಬಿ. ವೆಂಕಟೇಶ್

14. 59(538)

15. 60(469) 15 ದಿನಗಳ ಕಾಲಾವಕಾಶ

ದಿನಾಂಕ:19.02.2024ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ-Iರ 4ನೇ ಪಟ್ಟಿಯ ಒಟ್ಟು 164 ಪ್ರಶ್ನೆಗಳ ಪೈಕಿ 41 ಪ್ರಶ್ನೆಗಳಿಗೆ ಮಾನ್ಯ ಸಭಾನಾಯಕರು ಉತ್ತರಗಳನ್ನು ಮಂಡಿಸಿದರು.

**2. ಶೂನ್ಯ ವೇಳೆ ಪ್ರಸ್ತಾವಗಳು**

1. ಶ್ರೀಮತಿ ಭಾರತಿ ಶೆಟ್ಟಿ ಅವರು ಶಿವಮೊಗ್ಗದಿಂದ ಬೆಂಗಳೂರಿಗೆ ರೈಲಿನಲ್ಲಿ ಪ್ರಯಾಣ ಮಾಡುತ್ತಿದ್ದ ಮಹಿಳೆಯನ್ನು ಹತ್ಯೆ ಮಾಡಿ, ಚಿನ್ನಾಭರಣ ದೋಚಿ ಪರಾರಿಯಾಗಿರುವ ದುಷ್ಕರ್ಮಿಗಳ ಕುರಿತು ತನಿಖೆ ನಡೆಸಿ ಮಹಿಳೆಯರಿಗೆ ರಕ್ಷಣೆ ಮತ್ತು ಸುರಕ್ಷತೆ ಒದಗಿಸುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಗೃಹ ಸಚಿವರು ಉತ್ತರಿಸಿದರು.

2. ಶ್ರೀ ಡಿ.ಎಸ್. ಅರುಣ್ ಅವರು ಕ್ಯಾಸನೂರು ಫಾರೆಸ್ಟ್ ಡಿಸೀಸ್‌ಯಿಂದ ಮೃತಪಟ್ಟ ಸಂತ್ರಸ್ತರ ಕುಟುಂಬಗಳಿಗೆ ಸರ್ಕಾರದಿಂದ ಯಾವುದೇ ಪರಿಹಾರ ನೀಡದೆ ಇರುವುದರಿಂದ ಸಂತ್ರಸ್ತರು ಸಂಕಷ್ಟದಲ್ಲಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಉತ್ತರಿಸಿದರು.

3. ಶ್ರೀ ಎಸ್.ವ್ಹಿ. ಸಂಕನೂರ ಹಾಗೂ ಶ್ರೀಮತಿ ಉಮಾಶ್ರೀ ಅವರುಗಳು ಕನ್ನಡ ಭಾಷಾ ಸಂಶೋಧನೆಗಾಗಿ ಸ್ಥಾಪಿಸಿರುವ ಕನ್ನಡ ವಿಶ್ವವಿದ್ಯಾಲಯದಲ್ಲಿ ಅನುದಾನದ ಕೊರತೆಯಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿದ್ದು, ತುರ್ತಾಗಿ ಅನುದಾನ ಬಿಡುಗಡೆಗೊಳಿಸಲು ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರು ಉತ್ತರ ಒದಗಿಸುವುದಾಗಿ ತಿಳಿಸಿದರು.

4. ಶ್ರೀ ಮರಿತಿಬ್ಬೇಗೌಡ ಅವರು ದ್ವಿತೀಯ ಪಿ.ಯು.ಸಿ. ಉತ್ತರ ಪತ್ರಿಕೆಗಳ ಮೌಲ್ಯಮಾಪನ ದರ ಮತ್ತು ಇತರೆ ಭತ್ಯೆಗಳನ್ನು ಉಪನ್ಯಾಸಕರಿಗೆ ಮೌಲ್ಯಮಾಪನದ ಕೊನೆ ದಿನದಂದೇ ಪಾವತಿಸಲು ಕ್ರಮವಹಿಸುವ ಕುರಿತು ಪ್ರಸ್ತಾಪಿಸಿದರು.

ಮಧ್ಯಾಹ್ನ 12.40 ಗಂಟೆಯಲ್ಲಿ ಡಾ: ತೇಜಸ್ವಿನಿ ಗೌಡ ಅವರು ಮಾನ್ಯ ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. ಶ್ರೀ ಎಂ. ನಾಗರಾಜು ಅವರು ಅಂತರ್ಜಲ ಕುಸಿತದಿಂದ ಬೆಂಗಳೂರು ನಗರದಲ್ಲಿ ನೀರಿನ ಸಮಸ್ಯೆ ಎದುರಾಗಿದ್ದು, ನಾಗರೀಕರಿಗೆ ಕುಡಿಯುವ ನೀರು ಪೂರೈಸಲು ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. ಶ್ರೀ ಸಿ.ಎನ್. ಮಂಜೇಗೌಡ ಮತ್ತು ಶ್ರೀ ಶರವಣ ಟಿ.ಎ. ಅವರುಗಳು ರಾಜ್ಯದ ಹಲವು ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ರಂಗಾಯಣ ಸಂಸ್ಥೆಗಳಿಗೆ ಅನುದಾನ ಒದಗಿಸಿ, ನಾಟಕ ತರಬೇತಿ ಕಾರ್ಯಾಗಾರ ನಾಟಕೋತ್ಸವಗಳನ್ನು ಪ್ರೋತ್ಸಾಹಿಸಲು ಅನುದಾನ ಒದಗಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. ಶ್ರೀ ಮಂಜುನಾಥ್ ಭಂಡಾರಿ ಅವರು ಬೆಳ್ತಂಗಡಿ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿರುವ ರುದ್ರಭೂಮಿಗಳಿಗೆ ಸೂಕ್ತ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. ಶ್ರೀ ಗೋವಿಂದರಾಜು ಅವರು ಕೋಲಾರ ಜಿಲ್ಲೆಯಲ್ಲಿನ ಸರ್ಕಾರಿ ಕಛೇರಿಗಳಲ್ಲಿ ಹಾಗೂ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಮೂಲಸೌಕರ್ಯಗಳನ್ನು ಕಲ್ಪಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಯವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. ಶ್ರೀ ಪಿ.ಹೆಚ್. ಪೂಜಾರ್ ಅವರು ಕೆ.ಐ.ಎ.ಡಿ.ಬಿ. ವತಿಯಿಂದ ದಲಿತ ಉದ್ದಿಮೆದಾರರಿಗೆ ಹಂಚಿಕೆಯಾಗಿರುವ ನಿವೇಶನಗಳನ್ನು ಹಿಂಪಡೆಯದೆ ಯೋಜನೆಗಳನ್ನು ಜಾರಿಗೊಳಿಸಲು ಕಾಲಾವಕಾಶ ನೀಡುವ ಬಗ್ಗೆ ಹಾಗೂ ಸರ್ಕಾರದ ನಿಯಮಗಳನ್ನು ಮೀರಿ ನಿಯಮ ಬಾಹಿರವಾಗಿ ಭೂಮಿ ಹಂಚಿಕೆ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. ಶ್ರೀ ಎಸ್. ರುದ್ರೇಗೌಡ ಅವರು ಸ್ಟಾಂಪ್ ಡ್ಯೂಟಿ ಮತ್ತು ವಿವಿಧ ಬಾಂಡ್‌ಗಳ ಖರೀದಿ ದರ ಮುದ್ರಾಂಕ ಶುಲ್ಕ ಏರಿಕೆ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಂದಾಯ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

11. ಶ್ರೀ ಕೇಶವ ಪ್ರಸಾದ್ ಎಸ್. ಅವರು ಪಟಾಕಿ ಗೋದಾಮು ಸ್ಫೋಟಗೊಂಡು ಆಗುತ್ತಿರುವ ಅಗ್ನಿ ದುರಂತಗಳಿಂದ ಜೀವ ಹಾಗೂ ಆಸ್ತಿ ಹಾನಿಗಳನ್ನು ತಪ್ಪಿಸುವ ನಿಟ್ಟಿನಲ್ಲಿ ಸುರಕ್ಷಿತ ಗೋದಾಮು ನಿರ್ಮಾಣ ಹಾಗೂ ಜಾಗ್ರತೆ ಕ್ರಮಗಳನ್ನು ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

12. ಶ್ರೀಮತಿ ಹೇಮಲತಾ ನಾಯಕ್ ಅವರು ಕೊಪ್ಪಳ ಜಿಲ್ಲೆಯ ಕೇಸಲಾಪುರ ಗ್ರಾಮ ವ್ಯಾಪ್ತಿಯ ತುಂಗಭದ್ರ ಹಿನ್ನೀರಿನಲ್ಲಿ ಅಕ್ರಮ ಮರಳು ಗಣಿಗಾರಿಕೆಯನ್ನು ತಡೆದು ರೈತರ ಹಿತ ಕಾಪಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

13. ಶ್ರೀ ಎನ್. ರವಿಕುಮಾರ್ ಅವರು "ಜ್ಞಾನ ದೇಗುಲವಿದು ಕೈಮುಗಿದು ಒಳಗೆ ಬಾ" ಎಂಬ ಘೋಷ ವಾಕ್ಯವನ್ನು "ಜ್ಞಾನ ದೇಗುಲವಿದು ಧೈರ್ಯವಾಗಿ ಪ್ರಶ್ನಿಸಿ" ಎಂಬುದಾಗಿ ಬದಲಾಯಿಸುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಮಾಜ ಕಲ್ಯಾಣ ಸಚಿವರು ಉತ್ತರ ಒದಗಿಸಬೇಕು ಮತ್ತು ಸದರಿ ಆದೇಶವನ್ನು ಹಿಂಪಡೆಯಲು ಕ್ರಮ ವಹಿಸಬೇಕೆಂದು ಕೋರಿ ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾದರು.

## ೩. ಶೂನ್ಯವೇಳೆಯ ಪ್ರಸ್ತಾವನೆಗಳಿಗೆ ಉತ್ತರ

1. ಶ್ರೀ ಸಿ.ಎನ್. ಮಂಜೇಗೌಡ ಅವರು ರಾಜ್ಯದಲ್ಲಿನ ಅಂಗನವಾಡಿಗಳಲ್ಲಿ ಮಕ್ಕಳಿಗೆ, ಗರ್ಭಿಣಿಯರಿಗೆ ಹಾಗೂ ಬಾಣಂತಿಯರಿಗೆ ಪೌಷ್ಠಿಕಾಂಶದ ಆಹಾರ ಪದಾರ್ಥಗಳನ್ನು ಪೂರೈಸದಿರುವ ಕುರಿತು ದಿನಾಂಕ:13.02.2024ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

2. ಶ್ರೀ ಡಿ.ಎಸ್. ಅರುಣ್ ಅವರು ಗ್ರಾಮ ಪಂಚಾಯತಿಗಳು ಸ್ವಯಂ ಸರ್ಕಾರಗಳಾಗಿ ಕಾರ್ಯನಿರ್ವಹಿಸಲು ಅಗತ್ಯವಿರುವ ಕ್ರಮಗಳನ್ನು ಕೈಗೊಳ್ಳುವ ಕುರಿತು ದಿನಾಂಕ:13.02.2024ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

3. ಶ್ರೀ ಎಂ. ನಾಗರಾಜು ಅವರು ಉತ್ತರ ಕರ್ನಾಟಕದಲ್ಲಿ ಕ್ಯಾನ್ಸರ್ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವ ಕಾರಣ, ಮತ್ತಷ್ಟು ಕ್ಯಾನ್ಸರ್ ಆಸ್ಪತ್ರೆಗಳನ್ನು ನಿರ್ಮಿಸುವ ಕುರಿತು ದಿನಾಂಕ:13.02.2024ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

4. ಶ್ರೀ ವೈ.ಎಂ. ಸತೀಶ್ ಅವರು ರಾಜ್ಯದಲ್ಲಿ ಅಂಗವಿಕಲರಿಗೆ ಆರೋಗ್ಯ ಇಲಾಖೆಯ ವತಿಯಿಂದ ಗುರುತಿನ ಚೀಟಿ ತಲುಪಿಸಲು ಯೋಜನೆಯನ್ನು ರೂಪಿಸುವ ಕುರಿತು ದಿನಾಂಕ: 14.02.2024ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

5. ಶ್ರೀ ಹೆಚ್.ಎಸ್. ಗೋಪಿನಾಥ್ ಅವರು ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು ಪಿ.ಹೆಚ್.ಡಿ. ಪ್ರವೇಶಾತಿಗೆ ಶೀಘ್ರವಾಗಿ ಪರೀಕ್ಷೆಯನ್ನು ನಡೆಸುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವ ಕುರಿತು

ದಿನಾಂಕ:14.02.2024ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

ಸದನವನ್ನು ಮಧ್ಯಾಹ್ನ 1.13ರಲ್ಲಿ 05 ನಿಮಿಷಗಳ ಕಾಲ ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಡಾ: ತೇಜಸ್ವಿನಿ ಗೌಡ)** ಪ್ರಕಟಿಸಿದರು.

ಸದನವು 1.40 ಗಂಟೆಯಲ್ಲಿ ಮಾನ್ಯ ಸಭಾಪತಿಯವರ**(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**"ಗದ್ದಲ"**

ಮಾನ್ಯ ವಿರೋಧ ಪಕ್ಷದ ಶಾಸಕರುಗಳು ಧರಣಿಯನ್ನು ಮುಂದುವರೆಸಿದರು.

ಮಧ್ಯಾಹ್ನ 1.45 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.10 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಮಾನ್ಯ ವಿರೋಧ ಪಕ್ಷದ ಶಾಸಕರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು.

ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲಾದ ಸೂಚನೆಗೆ ಮಾನ್ಯ ಸಚಿವರಿಂದ ನಾಳೆ ಉತ್ತರ ಒದಗಿಸಲಾಗುವುದೆಂದು ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಧರಣಿ ನಿರತ ಶಾಸಕರುಗಳು ಧರಣಿ ಕೈಬಿಟ್ಟು ತಮ್ಮ ಸ್ಥಾನಗಳಿಗೆ ಹಿಂತಿರುಗಿದರು.

## 4. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ

ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿಯವರು ಚರ್ಚೆಯನ್ನು ಮುಂದುವರೆಸಿದರು.

೮. ಶ್ರೀಮತಿ ಉಮಾಶ್ರೀ

## 5. ಪ್ರಕಟಣೆ

**ಮಾನ್ಯ ಸಭಾಧ್ಯಕ್ಷರಿಂದ ಬಂದಿರುವ ಕೆಳಕಂಡ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ **104ನೇ ನಿಯಮದ** ಮೇರೆಗೆ ವಿಧಾನ ಸಭೆಯು **ದಿನಾಂಕ:19.02.2024**ರಂದು **"ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2024"ನ್ನು** ಅಂಗೀಕರಿಸಿರುತ್ತದೆಂದು ಹಾಗೂ ಸದರಿ ವಿಧೇಯಕಕ್ಕೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

## ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ

೯. ಶ್ರೀ ಕೆ. ಹರೀಶ್ ಕುಮಾರ್

10. ಡಾ: ತಳವಾರ್ ಸಾಬಣ್ಣ

11. ಶ್ರೀ ಕೆ. ಅಬ್ದುಲ್ ಜಬ್ಬರ್

## 6. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಕೋಟ ಶ್ರೀನಿವಾಸ ಪೂಜಾರಿ, ಮಾನ್ಯ ವಿರೋಧ ಪಕ್ಷದ ನಾಯಕರು, ಶ್ರೀ ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಶ್ರೀ ಶಾಂತರಾಮ್ ಬುಡ್ನ ಸಿದ್ದಿ, ಡಾ: ತಳವಾರ್ ಸಾಬಣ್ಣ, ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. ಹಾಗೂ

ಶ್ರೀ ಮುನಿರಾಜುಗೌಡ ಪಿ.ಎಂ. ಅವರುಗಳು ರಾಜ್ಯದಲ್ಲಿ ಇತ್ತೀಚೆಗೆ ಕೊಲೆ, ಕೋಮು ಗಲಭೆ, ಅತ್ಯಾಚಾರ, ಅಪರಾಧ ಕೃತ್ಯಗಳು ಮತ್ತು ಮಾರಣಾಂತಿಕ ಹಲ್ಲೆ ಪ್ರಕರಣಗಳು ಹೆಚ್ಚಾಗಿದ್ದು, ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕುಸಿದಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆದರು.

ಮಾನ್ಯ ಗೃಹ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಕೋಟ ಶ್ರೀನಿವಾಸ ಪೂಜಾರಿ, ಮಾನ್ಯ ವಿರೋಧ ಪಕ್ಷದ ನಾಯಕರು

2. ಶ್ರೀ ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು

3. ಡಾ: ತಳವಾರ್ ಸಾಬಣ್ಣ

4. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.

5. ಶ್ರೀ ಎಸ್.ವ್ಹಿ. ಸಂಕನೂರ

ಮಾನ್ಯ ಗೃಹ ಸಚಿವರು ಸ್ಪಷ್ಟೀಕರಣ ನೀಡಿದರು.

**ಪ್ರಕಟಣೆ**

**ಮಾನ್ಯ ಸಭಾಧ್ಯಕ್ಷರಿಂದ ಬಂದಿರುವ ಕೆಳಕಂಡ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು**.

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ **104ನೇ ನಿಯಮದ** ಮೇರೆಗೆ ವಿಧಾನ ಸಭೆಯು **ದಿನಾಂಕ:19.02.2024**ರಂದು **"ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ, 2024"ನ್ನು** ತಿದ್ದುಪಡಿಯೊಂದಿಗೆ ಹಾಗೂ **"ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ, 2024"ನ್ನು** ಅಂಗೀಕರಿಸಿರುತ್ತದೆಂದು

ಹಾಗೂ ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

**ಗಮನ ಸೆಳೆಯುವ ಸೂಚನೆಗಳು**

2. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ**. ಅವರು ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿ ನೋಂದಾಯಿತ "ಎ" ಮತ್ತು "ಬಿ" ದರ್ಜೆ ದೇವಾಲಯಗಳಲ್ಲಿ ಭಕ್ತರಿಗೆ ಕನಿಷ್ಠ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸದಿರುವುದು ಹಾಗೂ ದೇವಾಲಯಗಳ ಭದ್ರತೆ ಮತ್ತು ಸುರಕ್ಷತೆಗೆ ಸರ್ಕಾರ ಸೂಕ್ತ ಕ್ರಮ ವಹಿಸದಿರುವ ಬಗ್ಗೆ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಗಮನ ಸೆಳೆದರು.

   ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಉತ್ತರಿಸಿದರು.

3. **ಶ್ರೀ ಸುನೀಲ್ ವಲ್ಯಾಪುರ್** ಅವರು ಕಲಬುರಗಿ ಜಿಲ್ಲಾ ವ್ಯಾಪ್ತಿಯಲ್ಲಿರುವ ರಾಷ್ಟ್ರೀಯ/ರಾಜ್ಯ/ಜಿಲ್ಲಾ ಹೆದ್ದಾರಿಗಳ ಕಳಪೆ ಗುಣಮಟ್ಟದ ಕಾಮಗಾರಿಗಳಿಂದ ಹಾಗೂ ಅವೈಜ್ಞಾನಿಕ ರಸ್ತೆ ತಿರುವುಗಳಿಂದ ಅಪಘಾತಗಳು ಹೆಚ್ಚುತ್ತಿರುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆದರು.

**11.** **ಶ್ರೀ ಪಿ.ಹೆಚ್. ಪೂಜಾರ್** ಅವರು ಬಾಗಲಕೋಟೆ ಜಿಲ್ಲೆಯಲ್ಲಿ ನೀರಿನ ಸಮಸ್ಯೆ ತಲೆದೋರಿದ್ದು, ನೀರಿನ ಬವಣೆಯನ್ನು ಬಗೆಹರಿಸಿ, ನೀರಿನ ವ್ಯವಸ್ಥೆ ಕಲ್ಪಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 6. ಶೂನ್ಯವೇಳೆಯ ಪ್ರಸ್ತಾವನೆಗಳಿಗೆ ಉತ್ತರ

1. **ಶ್ರೀ ಎನ್. ರವಿಕುಮಾರ್** ಅವರು ಬೆಳಗಾವಿ ಜಿಲ್ಲೆಯ ಖಾನಾಪುರ ತಾಲ್ಲೂಕಿನಲ್ಲಿ ಯುವಕನೊಬ್ಬ ಹಸಿವಿನಿಂದ ಮೃತಪಟ್ಟಿರುವ ಬಗ್ಗೆ ಪತ್ರಿಕೆಗಳಲ್ಲಿ ಪ್ರಕಟವಾಗಿರುವ ಕುರಿತು ದಿನಾಂಕ:13.02.2024ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

2. **ಶ್ರೀ ಡಿ.ಎಸ್. ಅರುಣ್** ಅವರು ಕ್ಯಾಸನೂರು ಫಾರೆಸ್ಟ್ ಡಿಸೀಸ್‌ಯಿಂದ ಮೃತಪಟ್ಟ ಸಂತ್ರಸ್ತರ ಕುಟುಂಬಗಳಿಗೆ ಸರ್ಕಾರದಿಂದ ಯಾವುದೇ ಪರಿಹಾರ ನೀಡದೆ ಇರುವುದರಿಂದ ಸಂತ್ರಸ್ತರು ಸಂಕಷ್ಟದಲ್ಲಿರುವ ಕುರಿತು ದಿನಾಂಕ:19.02.2024ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

3. **ಶ್ರೀ ಮರಿತಿಬ್ಬೇಗೌಡ** ಅವರು ದ್ವಿತೀಯ ಪಿ.ಯು.ಸಿ. ಉತ್ತರ ಪತ್ರಿಕೆಗಳ ಮೌಲ್ಯಮಾಪನ ದರ ಮತ್ತು ಇತರೆ ಭತ್ಯೆಗಳನ್ನು ಉಪನ್ಯಾಸಕರಿಗೆ ಮೌಲ್ಯಮಾಪನದ ಕೊನೆ ದಿನದಂದೇ ಪಾವತಿಸಲು ಕ್ರಮವಹಿಸುವ ಕುರಿತು ದಿನಾಂಕ:19.02.2024ರಂದು ಪ್ರಸ್ತಾಪಿಸಿದ್ದ ಸೂಚನೆಗೆ

ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

4. **ಶ್ರೀ ಸಿ.ಎನ್. ಮಂಜೇಗೌಡ ಹಾಗೂ ಶ್ರೀ ಶರವಣ ಟಿ.ಎ.** ಅವರು ರಾಜ್ಯದ ಹಲವು ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ರಂಗಾಯಣ ಸಂಸ್ಥೆಗಳಿಗೆ ಅನುದಾನ ಒದಗಿಸಿ, ನಾಟಕ ತರಬೇತಿ ಕಾರ್ಯಾಗಾರ ನಾಟಕೋತ್ಸವಗಳನ್ನು ಪ್ರೋತ್ಸಾಹಿಸಲು ಅನುದಾನ ಒದಗಿಸುವ ಕುರಿತು ದಿನಾಂಕ:19.02.2024ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

5. **ಶ್ರೀ ಪಿ.ಹೆಚ್. ಪೂಜಾರ್** ಅವರು ಕೆ.ಐ.ಎ.ಡಿ.ಬಿ. ವತಿಯಿಂದ ದಲಿತ ಉದ್ದಿಮೆದಾರರಿಗೆ ಹಂಚಿಕೆಯಾಗಿರುವ ನಿವೇಶನಗಳನ್ನು ಹಿಂಪಡೆಯದೆ ಯೋಜನೆಗಳನ್ನು ಜಾರಿಗೊಳಿಸಲು ಕಾಲಾವಕಾಶ ನೀಡುವ ಬಗ್ಗೆ ಹಾಗೂ ಸರ್ಕಾರದ ನಿಯಮಗಳನ್ನು ಮೀರಿ ನಿಯಮ ಬಾಹಿರವಾಗಿ ಭೂಮಿ ಹಂಚಿಕೆ ಕುರಿತು ದಿನಾಂಕ:19.02.2024ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

6. **ಶ್ರೀ ಕೇಶವ ಪ್ರಸಾದ್ ಎಸ್** ಅವರು ಪಟಾಕಿ ಗೋದಾಮು ಸ್ಫೋಟಗೊಂಡು ಆಗುತ್ತಿರುವ ಅಗ್ನಿ ದುರಂತಗಳಿಂದ ಜೀವ ಹಾಗೂ ಆಸ್ತಿ ಹಾನಿಗಳನ್ನು ತಪ್ಪಿಸುವ ನಿಟ್ಟಿನಲ್ಲಿ ಸುರಕ್ಷಿತ ಗೋದಾಮು ನಿರ್ಮಾಣ ಹಾಗೂ ಜಾಗ್ರತೆ ಕ್ರಮಗಳನ್ನು ಕೈಗೊಳ್ಳುವ ಕುರಿತು ದಿನಾಂಕ:19.02.2024ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

7. **ಶ್ರೀ ಎಸ್. ರುದ್ರೇಗೌಡ** ಅವರು ರಾಜ್ಯದ ಹಲವು ಜಿಲ್ಲೆಗಳಲ್ಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳಿಗೆ ಮಾಸಿಕ ಬೇಡಿಕೆ ಪಟ್ಟಿಯಂತೆ ಅಕ್ಕಿ ದಾಸ್ತಾನಾಗದಿರುವ ಕುರಿತು

ದಿನಾಂಕ:20.02.2024ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

8. **ಶ್ರೀ ಮರಿತಿಬ್ಬೇಗೌಡ** ಅವರು ಡಿಪ್ಲೋಮೋ ಪರೀಕ್ಷೆಗಳು ಮತ್ತು ಉತ್ತರ ಪತ್ರಿಕೆಗಳ ಮೌಲ್ಯಮಾಪನ ದರ ಹಾಗೂ ಭತ್ಯೆಗಳನ್ನು ಪರಿಷ್ಕರಿಸುವ ಕುರಿತು ದಿನಾಂಕ:20.02.2024ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

9. **ಶ್ರೀ ಅ. ದೇವೇಗೌಡ** ಅವರು ಬೆಂಗಳೂರು ನಗರದಲ್ಲಿ ಗಾಂಜಾ ಅವ್ಯವಹಾರವನ್ನು ತಡೆಗಟ್ಟುವ ಕುರಿತು ದಿನಾಂಕ:20.02.2024ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

10. **ಶ್ರೀ ಕೆ. ಹರೀಶ್ ಕುಮಾರ್** ಅವರು ರಾಜ್ಯದಲ್ಲಿ ತೆಂಗಿನ ಮರಗಳಿಗೆ ಮಾರಕವಾಗಿರುವ ಕಪ್ಪುತಲೆ ಹುಳು ರೋಗದಿಂದ ರೈತರು ಸಂಕಷ್ಟಕ್ಕೀಡಾಗಿದ್ದು, ಅವರಿಗೆ ಪರಿಹಾರ ಘೋಷಿಸುವ ಕುರಿತು ದಿನಾಂಕ:20.02.2024ರಂದು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರ ಮಂಡಿಸಿದರು.

## ಶಾಸನ ರಚನೆ

### ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

03. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಜವಳಿ,

ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

ಮಧ್ಯಾಹ್ನ 2.35 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.15 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.45 ಗಂಟೆಗೆ ಮಾನ್ಯ ಉಪ ಸಭಾಪತಿಯವರ **(ಶ್ರೀ ಎಂ.ಕೆ. ಪ್ರಾಣೇಶ್)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 7. ಪ್ರಕಟಣೆಗಳು

**ಮಾನ್ಯ ಸಭಾಪತಿಯವರು ಈ ಕೆಳಕಂಡ ಪ್ರಕಟಣೆಗಳನ್ನು ಪ್ರಕಟಿಸಿದರು:**

**1.** ದಿನಾಂಕ: 24 ಮತ್ತು 25ನೇ ಫೆಬ್ರವರಿ, 2024ರಂದು ಎರಡು ದಿನಗಳ ಕಾಲ ರಾಷ್ಟ್ರೀಯ ಐಕ್ಯತೆ ಮತ್ತು ಸಂವಿಧಾನ ಜಾಗೃತಿ ಕಾರ್ಯಕ್ರಮಗಳನ್ನು ಬೆಂಗಳೂರಿನ ಅರಮನೆ ಮೈದಾನದಲ್ಲಿ ಏರ್ಪಡಿಸಲಾಗಿದೆ. ಈ ಕಾರ್ಯಕ್ರಮಗಳಲ್ಲಿ ಎಲ್ಲಾ ಮಾನ್ಯ ಶಾಸಕರುಗಳು ಭಾಗವಹಿಸಬೇಕೆಂದು ಈ ಮೂಲಕ ಕೋರಿದೆ.

**2.** ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಸಲಹಾ ಸಮಿತಿಯ ತೀರ್ಮಾನವು ಈ ಕೆಳಕಂಡಂತಿರುತ್ತದೆ:

- ➢ ವಿಧಾನ ಪರಿಷತ್ತಿನ 152ನೇ ಅಧಿವೇಶನದ ಉಪವೇಶನಗಳ ಕಾರ್ಯಕಲಾಪಗಳನ್ನು ದಿನಾಂಕ:26.02.2024ರವರೆಗೆ ಮುಂದುವರೆಸಲು ತೀರ್ಮಾನಿಸಲಾಗಿರುತ್ತದೆ.
- ➢ ಮಾನ್ಯ ಮುಖ್ಯಮಂತ್ರಿಯವರು ದಿನಾಂಕ:16.02.2024ರಂದು ಮಂಡಿಸಿರುವ 2024–25ನೇ ಸಾಲಿನ ರಾಜ್ಯದ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ ನಡೆಸುವುದು ಹಾಗೂ ದಿನಾಂಕ:26.02.2024ರಂದು ಸರ್ಕಾರ ಉತ್ತರ ನೀಡುವುದು.

- ಧನವಿನಿಯೋಗ ವಿಧೇಯಕ, ಹಣಕಾಸು ವಿಧೇಯಕಗಳು ಹಾಗೂ ಸರ್ಕಾರದಿಂದ ಸ್ವೀಕೃತವಾಗಲಿರುವ ವಿಧೇಯಕಗಳ ಮಂಡನೆ, ಚರ್ಚೆ ಹಾಗೂ ಅಂಗೀಕಾರ.

- ಗಮನ ಸೆಳೆಯುವ ಸೂಚನೆಗಳು.

ಕಾರ್ಯಕಲಾಪಗಳ ಸಲಹಾ ಸಮಿತಿಯ ಈ ವರದಿಗೆ ಸದನವು ಅನುಮೋದಿಸುವುದೆಂದು ಭಾವಿಸುತ್ತೇನೆ.

**3.** ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ **104ನೇ ನಿಯಮದ** ಮೇರೆಗೆ ವಿಧಾನ ಸಭೆಯು ದಿನಾಂಕ:23.02.2024ರಂದು **"ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ) (ತಿದ್ದುಪಡಿ) ವಿಧೇಯಕ, 2024"ನ್ನು** ಹಾಗೂ **"ಕರ್ನಾಟಕ ಭೂಕಂದಾಯ (ತಿದ್ದುಪಡಿ) ವಿಧೇಯಕ, 2024"ನ್ನು** ಅಂಗೀಕರಿಸಿರುತ್ತದೆಂದು ಹಾಗೂ ಸದರಿ ವಿಧೇಯಕಗಳಿಗೆ ಮಾನ್ಯ ಸಭಾಧ್ಯಕ್ಷರಿಂದ ಬಂದಿರುವ ಸಂದೇಶವನ್ನು ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

**ಶಾಸನ ರಚನೆ**

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

04. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಕೆಲವು ಅಧಿನಿಯಮಗಳು ಮತ್ತು ಪ್ರಾದೇಶಿಕ ಕಾನೂನುಗಳನ್ನು ನಿರಸನಗೊಳಿಸುವ ವಿಧೇಯಕ"ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಡಾ: ತೇಜಸ್ವಿನಿ ಗೌಡ
2. ಶ್ರೀ ಕೆ.ಎ. ತಿಪ್ಪೇಸ್ವಾಮಿ

3. ಶ್ರೀ ಎನ್. ರವಿಕುಮಾರ್

4. ಶ್ರೀ ಬಿ.ಕೆ. ಹರಿಪ್ರಸಾದ್

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

05. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರ ವಿಧೇಯಕ"ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಪರವಾಗಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಎಸ್.ವ್ಹಿ. ಸಂಕನೂರ

2. ಶ್ರೀ ಕೇಶವ ಪ್ರಸಾದ್ ಎಸ್

3. ಶ್ರೀ ಕೆ.ಎ. ತಿಪ್ಪೇಸ್ವಾಮಿ

4. ಡಾ: ತೇಜಸ್ವಿನಿ ಗೌಡ

5. ಶ್ರೀ ಸಲೀಂ ಅಹಮದ್, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**ಶೂನ್ಯವೇಳೆಯ ಪ್ರಸ್ತಾವನೆಗಳಿಗೆ ಉತ್ತರ**

1. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಅ. ದೇವೇಗೌಡ, ಚಿದಾನಂದ ಎಂ. ಗೌಡ ಹಾಗೂ ಡಾ:ವೈ.ಎ. ನಾರಾಯಣಸ್ವಾಮಿ** ಅವರುಗಳು ಪರೀಕ್ಷೆಯಲ್ಲಿ ನಕಲು ತಡೆಗಟ್ಟುವ ಸಲುವಾಗಿ ಬೋಧನಾ ಶಿಕ್ಷಕರನ್ನೇ ಪರೀಕ್ಷಾ ಕಾರ್ಯಗಳಿಗೆ ನೇಮಕ ಮಾಡುವ ಕುರಿತು ಪ್ರಸ್ತಾಪಿಸಿದ್ದ ಸೂಚನೆಗೆ ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಉತ್ತರಿಸಿದರು.

   ಮಾನ್ಯ ಶಾಸಕರುಗಳು ಉತ್ತರವನ್ನು ವಿರೋಧಿಸಿ ಸಭಾತ್ಯಾಗ ಮಾಡಿದರು.

**ಶಾಸನ ರಚನೆ**

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

06. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ವೃತ್ತಿಪರ ಸಿವಿಲ್ ಇಂಜಿನಿಯರುಗಳ ವಿಧೇಯಕ"ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಲೋಕೋಪಯೋಗಿ ಸಚಿವರ ಪರವಾಗಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿವರಣೆ ನೀಡಿದರು.

   ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

   1. ಶ್ರೀ ಡಿ.ಎಸ್. ಅರುಣ್
   2. ಶ್ರೀ ಅ. ದೇವೇಗೌಡ
   3. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.
   4. ಡಾ: ತೇಜಸ್ವಿನಿ ಗೌಡ

5. ಶ್ರೀ ಎನ್. ರವಿಕುಮಾರ್

6. ಶ್ರೀ ಎಸ್.ವ್ಹಿ. ಸಂಕನೂರ

7. ಶ್ರೀ ಬಿ.ಎಂ. ಫಾರೂಖ್

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

07. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ **"**ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ**"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಕೋಟ ಶ್ರೀನಿವಾಸ ಪೂಜಾರಿ, ಮಾನ್ಯ ವಿರೋಧ ಪಕ್ಷದ ನಾಯಕರು

ಸಂಜೆ 6.00 ಗಂಟೆಯಲ್ಲಿ ಡಾ: ತೇಜಸ್ವಿನಿಗೌಡ ಅವರು ಮಾನ್ಯ ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ಸಂಜೆ 6.15 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಸಭಾಪತಿಯವರ ಪೀಠದಲ್ಲಿ ಆಸೀನರಾದರು.

2. ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ

3. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.

4. ಶ್ರೀ ಶರವಣ ಟಿ.ಎ.

5. ಡಾ: ತೇಜಸ್ವಿನಿ ಗೌಡ

6. ಶ್ರೀಮತಿ ಉಮಾಶ್ರೀ

7. ಶ್ರೀಮತಿ ಭಾರತಿ ಶೆಟ್ಟಿ

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

**"ಗದ್ದಲ"**

ವಿಧೇಯಕಕ್ಕೆ ತಂದಿರುವ ತಿದ್ದುಪಡಿಯನ್ನು ವಿರೋಧಿಸಿ ವಿರೋಧ ಪಕ್ಷದ ಮಾನ್ಯ ಶಾಸಕರುಗಳು ವಿಧೇಯಕವನ್ನು ಮತಕ್ಕೆ ಹಾಕುವಂತೆ ಒತ್ತಾಯಿಸಿದರು.

**"ಗದ್ದಲ"**

ಸಂಜೆ 7.35 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಪ್ರಕಟಿಸಿದರು.

ಸದನವು ರಾತ್ರಿ 8.00 ಗಂಟೆಗೆ ಮಾನ್ಯ ಉಪ ಸಭಾಪತಿಯವರ (ಶ್ರೀ ಎಂ.ಕೆ. ಪ್ರಾಣೇಶ್) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಮಾನ್ಯ ಸಚಿವರು ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸಿದರು.

ವಿಧೇಯಕವನ್ನು ಪರ್ಯಾಲೋಚಿಸಬೇಕೆಂಬ ಪ್ರಸ್ತಾವವನ್ನು ಧ್ವನಿ ಮತಕ್ಕೆ ಹಾಕಲಾಯಿತು.

ಪ್ರಸ್ತಾವವನ್ನು ಧ್ವನಿ ಮತಕ್ಕೆ ಹಾಕಲಾಯಿತು.

ಪ್ರಸ್ತಾವವು ಇಲ್ಲ ಎನ್ನುವವರ ಪರವಾಗಿದ್ದು, ವಿಧೇಯಕವು ತಿರಸ್ಕರಿಸಲ್ಪಟ್ಟಿತು.

ಸದನವನ್ನು ರಾತ್ರಿ 8.03 ಗಂಟೆಯಲ್ಲಿ ಮುಂದೂಡಿ ದಿನಾಂಕ:26.02.2024ರಂದು ಬೆಳಗ್ಗೆ 10.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಪ್ರಕಟಿಸಿದರು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

*****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆರಡನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಸೋಮವಾರ, ದಿನಾಂಕ:26.02.2024**

(11)

ಸದನವು ಬೆಳಗ್ಗೆ: 11.15 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**1. ಸಂತಾಪ ಸೂಚನೆ**

ವಿಧಾನ ಸಭೆಯ ಹಾಲಿ ಶಾಸಕರಾದ ರಾಜಾ ವೆಂಕಟಪ್ಪ ನಾಯಕ ಅವರು ದಿನಾಂಕ:25.02.2024ರಂದು ನಿಧನ ಹೊಂದಿದ್ದು, ಮಾನ್ಯ ಸಭಾಪತಿಯವರು ಸಂತಾಪ ಸೂಚನಾ ನಿರ್ಣಯವನ್ನು ಮಂಡಿಸಿದರು.

ಮಾನ್ಯ ಸಭಾನಾಯಕರು ಹಾಗೂ ಮಾನ್ಯ ವಿರೋಧ ಪಕ್ಷದ ನಾಯಕರು ಮಾನ್ಯ ಸಭಾಪತಿಯವರು ಮಂಡಿಸಿದ ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

ಶ್ರೀ ಹೆಚ್.ಕೆ. ಪಾಟೀಲ್, ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸಂತಾಪ ವ್ಯಕ್ತಪಡಿಸಿ ಮಾತನಾಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಮಾತನಾಡಿದರು.

2. ಶ್ರೀ ಮಂಜುನಾಥ್ ಭಂಡಾರಿ
3. ಶ್ರೀಮತಿ ಹೇಮಲತಾ ನಾಯಕ್
4. ಡಾ: ತೇಜಸ್ವಿನಿ ಗೌಡ

5. ತಿಪ್ಪಣ್ಣಪ್ಪ ಕಮಕನೂರ

6. ಪ್ರಕಾಶ್ ಕೆ. ರಾಥೋಡ್

ಮೃತರ ಆತ್ಮಕ್ಕೆ ಶಾಂತಿ ಕೋರಿ ಒಂದು ನಿಮಿಷ ಮೌನ ಆಚರಿಸಲಾಯಿತು. ಅವರ ಕುಟುಂಬದವರಿಗೆ ಸಂತಾಪ ಸೂಚನಾ ನಿರ್ಣಯದ ಪ್ರತಿಯನ್ನು ಕಳುಹಿಸಿಕೊಡಲಾಗುವುದೆಂದು ಮಾನ್ಯ ಸಭಾಪತಿಯವರು ತಿಳಿಸಿದರು.

## 2. ಪ್ರಕಟಣೆ

ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಸಲಹಾ ಸಮಿತಿಯ ದಿನಾಂಕ:26.02.2024ರಂದು ಸಭೆ ಸೇರಿ ತೀರ್ಮಾನಿಸಲಾದಂತೆ, ವಿಧಾನ ಸಭೆಯ ಹಾಲಿ ಶಾಸಕರಾದ ಶ್ರೀ ರಾಜಾ ವೆಂಕಟಪ್ಪ ನಾಯಕ, ಅವರು ದಿನಾಂಕ:25.02.2024ರಂದು ನಿಧನ ಹೊಂದಿರುವ ಪ್ರಯುಕ್ತ ಸಂತಾಪ ಸೂಚನಾ ನಿರ್ಣಯವನ್ನು ಮಂಡಿಸಿ ಇಂದಿನ ಕಲಾಪವನ್ನು ಮುಂದೂಡಿ, ದಿನಾಂಕ:28.02.2024ರಂದು ಬೆಳಗ್ಗೆ 09.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು ಪ್ರಕಟಿಸಿದರು.

ಸದನವನ್ನು ಬೆಳಗ್ಗೆ 11.45 ಗಂಟೆಗೆ ಮುಂದೂಡಿ ದಿನಾಂಕ:28.02.20243ರಂದು ಬೆಳಿಗ್ಗೆ 9.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

*****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆರಡನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಬುಧವಾರ, ದಿನಾಂಕ:28.02.2024**

(12)

ಸದನವು ಬೆಳಗ್ಗೆ: 10.00 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಕಾರ್ಯದರ್ಶಿಯವರು ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದೆ ಮಂಡಿಸಿದರು.

01. ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ) (ತಿದ್ದುಪಡಿ) ವಿಧೇಯಕ, 2024

02 ಕರ್ನಾಟಕ ಭೂಕಂದಾಯ (ತಿದ್ದುಪಡಿ) ವಿಧೇಯಕ, 2024

ಮಾನ್ಯ ವಿರೋಧ ಪಕ್ಷದ ನಾಯಕರು ವಿಧಾನಸೌಧ ಆವರಣದಲ್ಲಿ ದಿನಾಂಕ:27.02.2024ರಂದು ರಾಷ್ಟ್ರ ವಿರೋಧಿ ಘೋಷಣೆ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಸು ದಾಖಲಿಸಲಾಗಿದ್ದು, ಸರ್ಕಾರ ಕ್ರಮ ಕೈಗೊಳ್ಳುವುದೆಂದು ಉತ್ತರಿಸಿದರು.

**"ಗದ್ದಲ"**

ಸದನವನ್ನು ಬೆಳಗ್ಗೆ 10.15 ಗಂಟೆಗೆ 10 ನಿಮಿಷಗಳ ಕಾಲ ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಬೆಳಗ್ಗೆ 11.10 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ದಿನಾಂಕ:27.02.2024ರಂದು ವಿಧಾನಸೌಧ ಆವರಣದಲ್ಲಿ ರಾಷ್ಟ್ರ ವಿರೋಧಿ ಘೋಷಣೆ ಕೂಗಿರುವವರ ಮೇಲೆ ಕಾನೂನು ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

**"ಗದ್ದಲ"**

**2. ಕ್ರಿಯಾಲೋಪ**

ಶ್ರೀ ಬಿ.ಕೆ. ಹರಿಪ್ರಸಾದ್ ಅವರು ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ದೇಶದ್ರೋಹಿ ಸರ್ಕಾರ ಎಂದು ಸದನದಲ್ಲಿ ಘೋಷಣೆ ಕೂಗಿರುವ ಬಗ್ಗೆ ಕ್ರಿಯಾಲೋಪವನ್ನೆತ್ತಿದ್ದರು.

**"ಗದ್ದಲ"**

ಬೆಳಗ್ಗೆ 11.25 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಬೆಳಗ್ಗೆ 11.50 ಗಂಟೆಯಲ್ಲಿ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಮಾನ್ಯ ಕಾನೂನು ಸಚಿವರು ಸದನದಲ್ಲಿ ಮಾತನಾಡಿರುವ ವಿಷಯದ ಬಗ್ಗೆ ವಿಷಾಧ ವ್ಯಕ್ತಪಡಿಸುತ್ತಾ, ಮಾನ್ಯ ಶಾಸಕರುಗಳು ತಮ್ಮ ಮಾತುಗಳಿಗೆ ಕ್ಷಮಾಪಣೆ ಕೋರುವುದೆಂದು ತಿಳಿಸಿದರು.

ಮಾನ್ಯ ಶಾಸಕರಾದ ಶ್ರೀ ಅಬ್ದುಲ್ ಜಬ್ಬರ್ ಅವರು ಏಕವಚನದಲ್ಲಿ ಮಾತನಾಡಿದ್ದು ನನ್ನ ಮಾತನ್ನು ಹಿಂಪಡೆಯುತ್ತೇನೆ ಎಂದು ತಿಳಿಸಿದರು.

ಮಧ್ಯಾಹ್ನ 12.08 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ರಾಷ್ಟ್ರ ವಿರೋಧಿ ಘೋಷಣೆ ಕುರಿತು ಈ ಕೆಳಕಂಡ ಶಾಸಕರುಗಳು ಮಾತನಾಡಿದರು.

1. ಶ್ರೀ ಬಿ.ಕೆ. ಹರಿಪ್ರಸಾದ್
2. ಶ್ರೀ ಕೋಟ ಶ್ರೀನಿವಾಸ ಪೂಜಾರಿ
3. ಡಾ: ವೈ.ಎ. ನಾರಾಯಣಸ್ವಾಮಿ
4. ಶರವಣ ಟಿ.ಎ.

ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಘೋಷಣೆಗಳನ್ನು ಕೂಗುತ್ತಾ ಸದನದ ಬಾವಿಯಲ್ಲಿ ಧರಣಿ ನಿರತರಾದರು.

**"ಗದ್ದಲ"**

**3. ಶಾಸನ ರಚನೆ**

01. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ **"ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ವಿವರಣೆ ನೀಡಿದರು.

    ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

02. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ **"ಶ್ರೀ ಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

03. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ **"ಶ್ರೀ ಹುಲಿಗೆಮ್ಮ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

ಮಧ್ಯಾಹ್ನ 1.30 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 2.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಉಪ ಸಭಾಪತಿಯವರು (**ಶ್ರೀ ಎಂ.ಕೆ. ಪ್ರಾಣೇಶ್**) ಪ್ರಕಟಿಸಿದರು.

ಸದನವು ಮಧ್ಯಾಹ್ನ 2.55 ಗಂಟೆಗೆ ಮಾನ್ಯ ಸಭಾಪತಿಯವರ (**ಬಸವರಾಜು ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು.

**ಶಾಸನ ರಚನೆ**

04. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ **"ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ) (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

05. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಂದಾಯ ಸಚಿವರ ಪರವಾಗಿ ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

ವಿರೋಧ ಪಕ್ಷದ ಮಾನ್ಯ ಶಾಸಕರುಗಳು ವಿಧೇಯಕದ ಮೇಲೆ ಚರ್ಚಿಸಬೇಕಾದ ಪ್ರಯುಕ್ತ ಧರಣಿ ಕೈಬಿಟ್ಟು ತಮ್ಮ ಆಸನಗಳಿಗೆ ತೆರಳಿದರು.

06. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಸಹಕಾರ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಕೋಟ ಶ್ರೀನಿವಾಸ ಪೂಜಾರಿ, ಮಾನ್ಯ ವಿರೋಧ ಪಕ್ಷದ ನಾಯಕರು

2. ಶ್ರೀ ಶರವಣ ಟಿ.ಎ.

ವಿರೋಧ ಪಕ್ಷದ ಮಾನ್ಯ ಶಾಸಕರುಗಳ ಒತ್ತಾಯದ ಮೇರೆಗೆ ವಿಧೇಯಕವನ್ನು ಪರಿಶೀಲನಾ ಸಮಿತಿಗೆ ವಹಿಸಲಾಯಿತು.

**4. ಪ್ರಕಟಣೆ**

ದಿನಾಂಕ:29.02.2024ರಂದು ಬೆಳಗ್ಗೆ 11.00 ಗಂಟೆಗೆ ಅರಮನೆ ಮೈದಾನ, ಬೆಂಗಳೂರು ಇಲ್ಲಿ ಕರ್ನಾಟಕ ಆಹಾರ ನಿಗಮದ ಸುವರ್ಣ ಮಹೋತ್ಸವ ಸಂಯೋಜಿತ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಮಾನ್ಯ ಶಾಸಕರುಗಳು ಭಾಗವಹಿಸಬೇಕೆಂದು ಮಾನ್ಯ ಸಭಾಪತಿಯವರು ಪ್ರಕಟಿಸಿದರು.

**5. ವಿತ್ತೀಯ ಕಾರ್ಯಕಲಾಪ**

ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಸಾಮಾನ್ಯ ಚರ್ಚೆ.

13. ಶ್ರೀ ಸಿ.ಎನ್. ಮಂಜೇಗೌಡ
14. ಶ್ರೀ ಪ್ರಕಾಶ್ ಕೆ. ರಾಥೋಡ್
15. ಶ್ರೀ ಎಸ್. ರುದ್ರೇಗೌಡ
16. ಶ್ರೀ ಶರವಣ ಟಿ.ಎ.
17. ಶ್ರೀ ತಿಪ್ಪಣ್ಣಪ್ಪ ಕಮಕನೂರ

**6. ಗಮನ ಸೆಳೆಯುವ ಸೂಚನೆಗಳು**

1. **ಶ್ರೀ ಬಿ.ಎಂ. ಫಾರೂಖ್** ಅವರು ತುಳು ಭಾಷೆಯನ್ನು ಕರ್ನಾಟಕ ರಾಜ್ಯದ ಎರಡನೇ ಭಾಷೆಯನ್ನಾಗಿ ಘೋಷಿಸಿ ಭಾರತ ಸಂವಿಧಾನದ 8ನೇ ಪರಿಚ್ಛೇದದಲ್ಲಿ ಸೇರ್ಪಡೆ ಮಾಡುವ ಕುರಿತು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆದರು.

ಸಂಜೆ 4.38 ಗಂಟೆಯಲ್ಲಿ ಮಾನ್ಯ ಉಪ ಸಭಾಪತಿಯವರು **(ಶ್ರೀ ಎಂ.ಕೆ. ಪ್ರಾಣೇಶ್)** ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಡಾ: ತೇಜಸ್ವಿನಿ ಗೌಡ
2. ಶ್ರೀ ಕೆ. ಹರೀಶ್ ಕುಮಾರ್
3. ಶೀಮತಿ ಭಾರತಿ ಶೆಟ್ಟಿ
4. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಸ್ಪಷ್ಟೀಕರಣ ನೀಡಿದರು.

2. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲೆಯಲ್ಲಿ ಖಾಸಗಿ ಆಸ್ಪತ್ರೆಯ ಆಡಳಿತ ಮಂಡಳಿಗಳು ಸರ್ಕಾರದ 108 ಆಂಬುಲೆನ್ಸ್ ಚಾಲಕರುಗಳಿಗೆ ಆಮಿಷವೊಡ್ಡಿ ರೋಗಿಗಳನ್ನು ಸರ್ಕಾರಿ ಆಸ್ಪತ್ರೆಗಳ ಬದಲು ಖಾಸಗಿ ಆಸ್ಪತ್ರೆಗಳಿಗೆ ದಾಖಲು ಮಾಡುತ್ತಿರುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆದರು.

ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಸ್ಪಷ್ಟೀಕರಣ ನೀಡಿದರು.

3. **ಶ್ರೀಯುತರುಗಳಾದ ಎಸ್.ವ್ಹಿ. ಸಂಕನೂರ, ರಘುನಾಥ್‌ರಾವ್ ಮಲ್ಕಾಪೂರೆ, ಎಂ.ಎಲ್. ಅನಿಲ್ ಕುಮಾರ್, ದಿನೇಶ್ ಗೂಳಿಗೌಡ, ಸುನೀಲ್ ವಲ್ಯಾಪುರ್, ಮರಿತಿಬ್ಬೇಗೌಡ ಹಾಗೂ ಇತರರು** ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಸುಂಕದ ಕಟ್ಟೆ ಗ್ರಾಮದ ಸರ್ವೆ ನಂ.37 ಮತ್ತು ನೆಟ್ಟಿಗೆರೆ ಗ್ರಾಮದ ಸರ್ವೆ ನಂ.42ಕ್ಕೆ ಸಂಬಂಧಿಸಿದಂತೆ ಪೋಡಿ ದುರಸ್ಥಿ ಬಗ್ಗೆ ಸ್ಥಳೀಯ ಅರಣ್ಯ ವ್ಯವಸ್ಥಾಪನಾ ಅಧಿಕಾರಿಗಳು ವಿಚಾರಣೆ ನಡೆಸಿ, ಆದೇಶ ಹೊರಡಿಸಲಾಗಿದ್ದರೂ ಅಂದಿನ ಎ.ಸಿ.ಎಫ್. ಅವರು ಸುಳ್ಳು ದಾಖಲಾತಿಗಳನ್ನು ಸೃಷ್ಟಿಸಿ ವಿನಾಕಾರಣ ಕಿರುಕುಳ ನೀಡುತ್ತಿರುವ

ಕುರಿತು ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರ ಗಮನ ಸೆಳೆದರು.

ಸಂಜೆ 5.33 ಗಂಟೆಗೆ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪೀಠದಲ್ಲಿ ಆಸೀನರಾದರು.

ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಉತ್ತರಿಸಿದರು.

ಮಾನ್ಯ ಶಾಸಕರು ಸ್ಪಷ್ಟೀಕರಣ ಕೋರಿದರು.

ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಸ್ಪಷ್ಟೀಕರಣ ನೀಡಿದರು.

4. **ಶ್ರೀ ಎಸ್. ರವಿ** ಅವರು ಬೆಂಗಳೂರು ನಗರದ ಬನಶಂಕರಿಯಿಂದ ತಲಘಟ್ಟಪುರದವರೆಗೆ ವಾಹನಗಳ ದಟ್ಟಣೆ ಹೆಚ್ಚಾಗಿರುವ ಕಾರಣ ಸದರಿ ರಸ್ತೆಯಲ್ಲಿ ಪ್ರಯಾಣಿಕರ ಸುಗಮ ಸಂಚಾರಕ್ಕೆ ಅನುಕೂಲವಾಗುವಂತೆ ಫ್ಲೈಓವರ್ ನಿರ್ಮಾಣ ಅಥವಾ ಬೇರೆ ಯಾವುದಾದರೂ ಯೋಜನೆಯನ್ನು ರೂಪಿಸುವ ಕುರಿತು ಮಾನ್ಯ ಉಪ ಮುಖ್ಯಮಂತ್ರಿಯವರ ಗಮನ ಸೆಳೆದರು.

ಮಾನ್ಯ ಉಪ ಮುಖ್ಯಮಂತ್ರಿಗಳ ಪರವಾಗಿ ಮಾನ್ಯ ಸಭಾನಾಯಕರು ಉತ್ತರಿಸಿದರು.

5. **ಡಾ:ತಳವಾರ್ ಸಾಬಣ್ಣ** ಅವರು ಭಾರತ ಸಂವಿಧಾನದ 315ನೇ ಅನುಚ್ಛೇದದ ಅಡಿಯಲ್ಲಿ ರಚಿತವಾದ ಕರ್ನಾಟಕ ಲೋಕ ಸೇವಾ ಆಯೋಗದ ಅಧ್ಯಕ್ಷರು/ಸದಸ್ಯರುಗಳು ಮತ್ತು ಕಾರ್ಯದರ್ಶಿಗಳ ನಡುವಿನ ಅಧಿಕಾರ ಚಲಾವಣೆಯಲ್ಲಿನ ಗೊಂದಲದ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆದರು.

ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಮಾನ್ಯ ಸಭಾನಾಯಕರು ಉತ್ತರಿಸಿದರು.

## 7. ನಿಯಮ 330ಎ ರ ಅಡಿಯಲ್ಲಿ ವಿಶೇಷ ಪ್ರಸ್ತಾವಗಳು

1. **ಶ್ರೀ ಮರಿತಿಬ್ಬೇಗೌಡ** ಅವರು ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ/ ಅನುದಾನಿತ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧ್ಯಾಪಕರುಗಳಿಗೆ ಯುಜಿಸಿ ನಿಯಮಾವಳಿಯಂತೆ ಸ್ಥಾನೀಕರಣ ಹಾಗು ಸಿ.ಎ.ಎಸ್. ಅಡಿಯಲ್ಲಿ ಬಡ್ತಿ ನೀಡುವಲ್ಲಿ ವಿಳಂಬವಾಗುತ್ತಿರುವ ಕುರಿತು ಪ್ರಸ್ತಾಪಿಸಿದರು.

   ಸಂಬಂಧಪಟ್ಟ ಮಾನ್ಯ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ನಿರಾಣಿ ಹಣಮಂತ ರುದ್ರಪ್ಪ** ಅವರು ಕೃಷ್ಣ ಮೇಲ್ದಂಡೆ ಯೋಜನೆ ಮೂರನೇ ಹಂತದ ಅನುಷ್ಠಾನ ಕುರಿತು ಪ್ರಸ್ತಾಪಿಸಿದರು.

   ಸಂಬಂಧಪಟ್ಟ ಮಾನ್ಯ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀಮತಿ ಹೇಮಲತಾ ನಾಯಕ್** ಅವರು ಕೊಪ್ಪಳ ನಗರದ ಸುತ್ತಮುತ್ತ ಸುಮಾರು 202 ಅನಧಿಕೃತ ಕಾರ್ಖಾನೆಗಳು ತಲೆ ಎತ್ತುತ್ತಿದ್ದು, ಈ ಕಾರ್ಖಾನೆಗಳು ಹೊರಸೂಸುವ ತ್ಯಾಜ್ಯದಿಂದ ರೈತರ ಬೆಳೆಗಳಿಗೆ ಹಾನಿಯಾಗುತ್ತಿರುವ ಕುರಿತು ಪ್ರಸ್ತಾಪಿಸಿದರು.

   ಸಂಬಂಧಪಟ್ಟ ಮಾನ್ಯ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ಡಿ.ಎಸ್. ಅರುಣ್** ಅವರು ಹುಣಸೂರು ತಾಲ್ಲೂಕಿನ ದಾಸನಪುರ ಗ್ರಾಮದ ವಿದ್ಯಾರ್ಥಿಯೊಬ್ಬ ಅನುಮಾನಾಸ್ಪದವಾಗಿ ಮೃತಪಟ್ಟಿದ್ದು, ಕೂಡಲೇ ತನಿಖೆಗೆ ಆದೇಶ ಮಾಡಿ ತಪ್ಪಿತಸ್ಥರವನ್ನು ಬಂಧಿಸುವಂತೆ ಹಾಗೂ ಮೃತ ವಿದ್ಯಾರ್ಥಿ ಕುಟುಂಬಕ್ಕೆ ಪರಿಹಾರ ಒದಗಿಸುವ ಕುರಿತು ಪ್ರಸ್ತಾಪಿಸಿದರು.

   ಸಂಬಂಧಪಟ್ಟ ಮಾನ್ಯ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

ಸದನವನ್ನು ಸಂಜೆ 6.25 ಗಂಟೆಗೆ ಮುಂದೂಡಿ, ದಿನಾಂಕ:29.02.20243ರಂದು ಬೆಳಿಗ್ಗೆ 10.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

*****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆರಡನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಗುರುವಾರ, ದಿನಾಂಕ:29.02.2024**

(13)

ಸದನವು ಬೆಳಗ್ಗೆ: 10.23 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಹಕ್ಕುಚ್ಯುತಿ ಪ್ರಸ್ತಾವ

ಮಾನ್ಯ ಶಾಸಕರಾದ ಶ್ರೀ ಬಿ.ಕೆ. ಹರಿಪ್ರಸಾದ್ ಅವರು ಮಾಧ್ಯಮಗಳಲ್ಲಿ ಶಾಸಕರು ದಿನಾಂಕ:28.02.2024ರಂದು ಸದನದಲ್ಲಿ ಮಾತನಾಡಿಲ್ಲದಿರುವುದನ್ನು ಮುದ್ರಿಸಿರುವ ಬಗ್ಗೆ ಪ್ರಸ್ತಾಪಿಸಿದರು.

ಮಾನ್ಯ ಸಭಾಪತಿಯವರು ಸೂಚನೆ ನೀಡುವಂತೆ ತಿಳಿಸಿದರು.

ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಮಾನ್ಯ ಶಾಸಕರುಗಳು ರಾಷ್ಟ್ರ ವಿರೋಧಿ ಘೋಷಣೆ ಕೂಗಿರುವವರ ವಿರುದ್ಧ ಕ್ರಮಕೈಗೊಳ್ಳಬೇಕೆಂದು ಒತ್ತಾಯಿಸಿ ಚರ್ಚೆಗೆ ಅವಕಾಶ ನೀಡಬೇಕೆಂದು ಕೋರಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಚರ್ಚೆಗೆ ಅವಕಾಶ ನೀಡಬೇಕೆಂದು ಒತ್ತಾಯಿಸುತ್ತಾ ಸದನದ ಬಾವಿಯಲ್ಲಿ ಧರಣಿ ನಿರತರಾದರು.

ಸದನವನ್ನು ಬೆಳಗ್ಗೆ 10.40 ಗಂಟೆಗೆ 10 ನಿಮಿಷಗಳ ಕಾಲ ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಬೆಳಗ್ಗೆ 11.30 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**2. ವಿತ್ತೀಯ ಕಾರ್ಯಕಲಾಪ**

ಆಯವ್ಯಯ ಅಂದಾಜುಗಳ ಮೇಲೆ ಮುಂದುವರೆದ ಸಾಮಾನ್ಯ ಚರ್ಚೆ

18. ಶ್ರೀ ಮರಿತಿಬ್ಬೇಗೌಡ

19. ಶ್ರೀ ಬಿ.ಎಂ. ಫಾರೂಖ್

ಮಧ್ಯಾಹ್ನ 12.20 ಗಂಟೆಯಲ್ಲಿ ಶ್ರೀ ಮರಿತಿಬ್ಬೇಗೌಡ ಅವರು ಮಾನ್ಯ ಸಭಾಪತಿಯವರ ಪೀಠದಲ್ಲಿ ಆಸೀನರಾದರು.

20. ಶ್ರೀ ಅಡಗೂರ್ ಹೆಚ್. ವಿಶ್ವನಾಥ್

ಮಧ್ಯಾಹ್ನ 12.40 ಗಂಟೆಗೆ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

**3. ಪ್ರಕಟಣೆ**

**ಮಾನ್ಯ ಸಭಾಧ್ಯಕ್ಷರಿಂದ ಬಂದಿರುವ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ 104ನೇ ನಿಯಮದ ಮೇರೆಗೆ ವಿಧಾನ ಸಭೆಯು ದಿನಾಂಕ:29.02.2024ರಂದು **"**ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ, 2024**"**ನ್ನು ಪುನರ್ ಪರ್ಯಾಲೋಚಿಸಿ ಅಂಗೀಕರಿಸಿತೆಂದು, **"**ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕ, 2024**"**ನ್ನು ತಿದ್ದುಪಡಿಯೊಂದಿಗೆ ಹಾಗೂ ಈ ಕೆಳಕಂಡ ವಿಧೇಯಕಗಳನ್ನು ಅಂಗೀಕರಿಸಿರುತ್ತದೆಂದು ಹಾಗೂ ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

1. ಕರ್ನಾಟಕ ಧನವಿನಿಯೋಗ ವಿಧೇಯಕ, 2024
2. ಕರ್ನಾಟಕ ಧನವಿನಿಯೋಗ (ಸಂಖ್ಯೆ–2) ವಿಧೇಯಕ, 2024
3. ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕ, 2024
4. ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ವಿಧೇಯಕ, 2024

**4. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು**

**ಕಾರ್ಯದರ್ಶಿಯವರು ಈ ಕೆಳಕಂಡ ವಿಧೇಯಕಗಳನ್ನು ಮಂಡಿಸಿದರು**

01. ಕರ್ನಾಟಕ ಧನವಿನಿಯೋಗ ವಿಧೇಯಕ, 2024
02. ಕರ್ನಾಟಕ ಧನವಿನಿಯೋಗ (ಸಂಖ್ಯೆ–2) ವಿಧೇಯಕ, 2024
03. ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕ, 2024
04. ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ವಿಧೇಯಕ, 2024
05. ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕ, 2024
06. ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ ಮತ್ತು ಪರಿಷತ್ತಿನಿಂದ ತಿರಸ್ಕೃತಗೊಂಡ ರೂಪದಲ್ಲಿ ಹಾಗೂ ಎರಡನೇ ಬಾರಿಗೆ ವಿಧಾನ ಸಭೆಯಿಂದ ಅಂಗೀಕಾರವಾದ ರೂಪದಲ್ಲಿರುವ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ, 2024

**ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಸಾಮಾನ್ಯ ಚರ್ಚೆ**

21. ಶ್ರೀಮತಿ ಭಾರತಿ ಶೆಟ್ಟಿ

**6. ಗಮನ ಸೆಳೆಯುವ ಸೂಚನೆಗಳು**

1. **ಶ್ರೀ ಎನ್. ರವಿಕುಮಾರ್** ಅವರು ರಾಮನಗರ ಜಿಲ್ಲೆಯ ಮಾಗಡಿ ತಾಲ್ಲೂಕಿನ ಕಲ್ಯಾ ಪಂಚಾಯತಿ ವ್ಯಾಪ್ತಿಯ ಹುಜಗಲ್‌ನ ಕಾಡಿನಲ್ಲಿ ವಾಸ ಮಾಡುತ್ತಿರುವ ಇರುಳಿಗ ಸಮುದಾಯದವರಿಗೆ ಹಕ್ಕುಪತ್ರ ನೀಡಿ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆದರು.

   ಮಾನ್ಯ ಕಂದಾಯ ಸಚಿವರ ಪರವಾಗಿ ಮಾನ್ಯ ಸಭಾನಾಯಕರು ಉತ್ತರಿಸಿದರು.

2. **ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರು ವಿಧಾನಸೌಧ, ವಿಕಾಸಸೌಧ ಮತ್ತು ಶಾಸಕರ ಭವನದ ಆವರಣದಲ್ಲಿ ವಿಶ್ವಕರ್ಮ ಸಮಾಜದ ಭಗವಾನ್ ವಿಶ್ವಕರ್ಮ ಅಥವಾ ಅಮರಶಿಲ್ಪಿ ಜಕಣಾಚಾರಿ ಪ್ರತಿಮೆಯನ್ನು ಸ್ಥಾಪಿಸುವ ಕುರಿತು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆದರು.

   ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಉತ್ತರಿಸಿದರು.

3. **ಶ್ರೀ ಯು.ಬಿ. ವೆಂಕಟೇಶ್** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ವಹಿಸಿರುವ ಕಾಮಗಾರಿಗಳಿಗೆ ಎರಡೆರಡು ಬಾರಿ ಬಿಲ್ ಪಾವತಿಯಾಗಿರುವುದರಿಂದ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಿರುವ ಕುರಿತು ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆದರು.

   ಮಾನ್ಯ ಉಪ ಮುಖ್ಯಮಂತ್ರಿಗಳ ಪರವಾಗಿ ಮಾನ್ಯ ಸಭಾನಾಯಕರು ಉತ್ತರಿಸಿದರು.

4. **ಶ್ರೀಯುತರುಗಳಾದ ವೈ.ಎಂ. ಸತೀಶ್, ಡಿ.ಎಸ್. ಅರುಣ್, ಕೆ.ಎಸ್. ನವೀನ್ ಹಾಗೂ ಎಸ್. ರುದ್ರೇಗೌಡ** ಅವರುಗಳು ತುಂಗಭದ್ರಾ ನದಿಯಲ್ಲಿ ಹಾನಿಕಾರಕ ಲೋಹಗಳು ಪತ್ತೆಯಾಗಿದ್ದು, ಕಲುಷಿತ ನೀರು ಕುಡಿಯಲು ಮತ್ತು ಕೃಷಿಗೆ ಬಳಸಲು

ಯೋಗ್ಯವಲ್ಲದಿರುವುದರಿಂದ ಶುದ್ಧೀಕರಿಸಲು ಕ್ರಮ ಕೈಗೊಳ್ಳುವ ಕುರಿತು ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರ ಗಮನ ಸೆಳೆದರು.

ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಉತ್ತರಿಸಿದರು.

**7. ನಿಯಮ 330ಎ ರ ಅಡಿಯಲ್ಲಿ ವಿಶೇಷ ಪ್ರಸ್ತಾವಗಳು**

1. **ಶ್ರೀ ನಿರಾಣಿ ಹಣಮಂತ ರುದ್ರಪ್ಪ** ಅವರು ಹೈದ್ರಾಬಾದ್–ಕರ್ನಾಟಕ ಶಿಕ್ಷಣ ಸಂಸ್ಥೆಯ ಅಂಗ ಸಂಸ್ಥೆಯಾದ ಮಹಾದೇವಪ್ಪ ರಾಂಪುರ ವೈದ್ಯಕೀಯ ಶಿಕ್ಷಣ ಕಾಲೇಜಿನಲ್ಲಿ ಪಿ.ಜಿ. ವಿದ್ಯಾರ್ಥಿಗಳ ಶಿಷ್ಯ ವೇತನ ನೀಡುವಲ್ಲಿ ಭಾರಿ ಅವ್ಯವಹಾರ ನಡೆಸಿರುವ ಕುರಿತು ಪ್ರಸ್ತಾಪಿಸಿದರು.

   ಸಂಬಂಧಪಟ್ಟ ಮಾನ್ಯ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀಮತಿ ಹೇಮಲತಾ ನಾಯಕ್** ಅವರು ಕೊಪ್ಪಳ ತಾಲ್ಲೂಕಿನ ಹುಲಿಗೆಮ್ಮ ದೇವಸ್ಥಾನ ಕ್ಷೇತ್ರದಲ್ಲಿ ಭಕ್ತಾದಿಗಳು ನದಿ ದಡದಲ್ಲಿ ಪುಣ್ಯ ಸ್ನಾನ ಮಾಡಲು ಸೂಕ್ತ ವ್ಯವಸ್ಥೆ ಹಾಗೂ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿಕೊಡುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಉತ್ತರಿಸಿದರು.

3. **ಶ್ರೀ ಮುನಿರಾಜು ಗೌಡ ಪಿ.ಎಂ.** ಅವರು ರಾಜ್ಯದ ಬಹುಸಂಖ್ಯಾತರಿಗೆ ಯಾವುದೇ ರೀತಿಯ ಯೋಜನೆಗಳನ್ನು ಮತ್ತು ಅನುದಾನಗಳನ್ನು ನಿಗದಿಪಡಿಸದೆ ಇರುವ ಕುರಿತು ಪ್ರಸ್ತಾಪಿಸಿದರು.

   ಸಂಬಂಧಪಟ್ಟ ಮಾನ್ಯ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ಮರಿತಿಬ್ಬೇಗೌಡ ಪಿ.ಎಂ.** ಅವರು ದ್ವಿತೀಯ ಪಿಯುಸಿ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಾ ಕಾರ್ಯನಿರ್ವಹಿಸಲು 55 ವರ್ಷದ ವಯೋಮಾನದವರನ್ನು, ನಿವೃತ್ತಿ ಅಂಚಿನಲ್ಲಿರುವವರನ್ನು ಹಾಗೂ

ಅನಾರೋಗ್ಯದಿಂದ ಬಳಲುತ್ತಿರುವ ಉಪನ್ಯಾಸಕರಿಗೆ ಕಡ್ಡಾಯ ವಿನಾಯಿತಿ ನೀಡುವ ಕುರಿತು ಪ್ರಸ್ತಾಪಿಸಿದರು.

ಸಂಬಂಧಪಟ್ಟ ಮಾನ್ಯ ಸಚಿವರಿಂದ ಉತ್ತರ ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

**8. ಪ್ರಶ್ನೋತ್ತರ**

ದಿನಾಂಕ:12.02.2024 ರಿಂದ 29.02.2024ರವರೆಗೆ ನಡೆದ 152ನೇ ಅಧಿವೇಶನದಲ್ಲಿ ಪ್ರಶ್ನೋತ್ತರ ಅವಧಿಯ ನಂತರ ವಿವಿಧ ಇಲಾಖೆಗಳಿಂದ ಸ್ವೀಕರಿಸಲಾದ ಒಟ್ಟು 364 ಲಿಖಿತ ಮೂಲಕ ಉತ್ತರಿಸುವ 364 ಪ್ರಶ್ನೆಗಳಿಗೆ, ನಿಯಮ–72ರ 51 ಸೂಚನೆಗಳಿಗೆ, ನಿಯಮ 330ರ 46 ಸೂಚನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

ಮಧ್ಯಾಹ್ನ 2.25 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.15 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.45 ಗಂಟೆಗೆ ಮಾನ್ಯ ಉಪ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**2024–25ನೇ ಸಾಲಿನ ಆಯವ್ಯಯದ ಮೇಲಿನ ಚರ್ಚೆಗೆ ಸರ್ಕಾರದ ಉತ್ತರ**

ಮಾನ್ಯ ಮುಖ್ಯಮಂತ್ರಿಗಳು ಆಯವ್ಯಯದ ಮೇಲಿನ ಚರ್ಚೆಗೆ ಉತ್ತರಿಸಿದರು.

**9. ಶಾಸನ ರಚನೆ**

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**4. "ಕರ್ನಾಟಕ ಧನವಿನಿಯೋಗ ವಿಧೇಯಕ", 2024**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಧನವಿನಿಯೋಗ ವಿಧೇಯಕ"ವನ್ನು ಪರ್ಯಾಲೋಚಿಸಿ

ಅಂಗೀಕರಿಸಬೇಕೆಂದು ಮಾನ್ಯ ಮುಖ್ಯಮಂತ್ರಿಗಳು ಸೂಚಿಸಿ ವಿಧೇಯಕದ ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**2. "ಕರ್ನಾಟಕ ಧನವಿನಿಯೋಗ (ಸಂಖ್ಯೆ–2) ವಿಧೇಯಕ", 2024**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಧನವಿನಿಯೋಗ (ಸಂಖ್ಯೆ–2) ವಿಧೇಯಕ"ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಮುಖ್ಯಮಂತ್ರಿಗಳು ಸೂಚಿಸಿ ವಿಧೇಯಕದ ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**3. "ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕ", 2024**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕ"ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಮುಖ್ಯಮಂತ್ರಿಗಳು ಸೂಚಿಸಿ ವಿಧೇಯಕದ ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**4. "ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು**

**ಕ್ಷೇಮಾಭಿವೃದ್ಧಿ ವಿಧೇಯಕ", 2024**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ವಿಧೇಯಕ"ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಕಾರ್ಮಿಕ ಸಚಿವರು ಸೂಚಿಸಿ ವಿಧೇಯಕದ ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**5. "ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕ", 2024**

ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಸೂಚಿಸಿ ವಿಧೇಯಕದ ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

**6. ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ ಮತ್ತು ಪರಿಷತ್ತಿನಿಂದ ತಿರಸ್ಕೃತಗೊಂಡ ರೂಪದಲ್ಲಿ ಹಾಗೂ ಎರಡನೇ ಬಾರಿಗೆ ವಿಧಾನ ಸಭೆಯಿಂದ ಅಂಗೀಕಾರವಾದ ರೂಪದಲ್ಲಿರುವ "ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ", 2024**

ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ ಮತ್ತು ಪರಿಷತ್ತಿನಿಂದ ತಿರಸ್ಕೃತಗೊಂಡ ರೂಪದಲ್ಲಿ ಹಾಗೂ ಎರಡನೇ ಬಾರಿಗೆ ವಿಧಾನ ಸಭೆಯಿಂದ ಅಂಗೀಕಾರವಾದ ರೂಪದಲ್ಲಿರುವ "ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಸೂಚಿಸಿ ವಿಧೇಯಕದ ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

2024ರ ಜೂನ್ ಮಾಹೆಯಲ್ಲಿ ನಿವೃತ್ತಿ ಹೊಂದಲಿರುವ ಮಾನ್ಯ ಶಾಸಕರುಗಳಿಗೆ ಮಾನ್ಯ ಸಭಾನಾಯಕರು ಮತ್ತು ಮಾನ್ಯ ವಿರೋಧ ಪಕ್ಷದ ನಾಯಕರು ಅಭಿನಂದನೆ ಸಲ್ಲಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಮಾತನಾಡಿದರು.

1. ಶ್ರೀ ಅರವಿಂದ ಕುಮಾರ್ ಅರಳಿ
2. ಡಾ: ತೇಜಸ್ವಿನಿ ಗೌಡ

3. ಶ್ರೀ ಎಸ್. ರುದ್ರೇಗೌಡ

4. ಶ್ರೀ ಎನ್. ರವಿಕುಮಾರ್

5. ಶ್ರೀ ಕೆ. ಹರೀಶ್ ಕುಮಾರ್

6. ಶ್ರೀ ಮುನಿರಾಜು ಗೌಡ ಪಿ.ಎಂ.

7. ಶ್ರೀ ಅ. ದೇವೇಗೌಡ

8. ಶ್ರೀ ಬಿ.ಎಂ. ಫಾರೂಖ್

9. ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ

ಮಾನ್ಯ ಸಭಾಪತಿಯವರು ಮಾನ್ಯ ಶಾಸಕರುಗಳಿಗೆ ಅಭಿನಂದಿಸಿ ಶುಭ ಕೋರಿದರು.

**ಸಾರಾಂಶ**

**ಮಾನ್ಯ ಸಭಾಪತಿಯವರು:**

ವಿಧಾನ ಪರಿಷತ್ತಿನ 152ನೇ ಅಧಿವೇಶನದ ಉಪವೇಶನದಲ್ಲಿ ನಡೆದಿರುವ ಕಾರ್ಯಕಲಾಪಗಳ ವಿವರವನ್ನು ಸದನಕ್ಕೆ ತಿಳಿಸಲು ಇಚ್ಛಿಸುತ್ತೇನೆ. ಪ್ರಸ್ತುತ ಅಧಿವೇಶನವು ದಿನಾಂಕ:12.02.2024ರಿಂದ 29.02.2024ರವರೆಗೆ ಒಟ್ಟು 13 ದಿನಗಳು ಅಂದರೆ, 69.25 ಗಂಟೆಗಳು ನಡೆಸಲಾಗಿರುತ್ತದೆ.

ದಿನಾಂಕ:12.02.2024ರಂದು ಬೆಳಗ್ಗೆ 11.00 ಗಂಟೆಗೆ ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಉಭಯ ಸದನಗಳನ್ನುದ್ದೇಶಿಸಿ ಭಾಷಣ ಮಾಡುವುದರೊಂದಿಗೆ ಪ್ರಾರಂಭಗೊಂಡಿತು. ವಂದನಾ ನಿರ್ಣಯದ ಮೇಲೆ 06 ಗಂಟೆ 25 ನಿಮಿಷಗಳು ಚರ್ಚೆ ನಡೆಸಿ ದಿನಾಂಕ:21.02.2024ರಂದು ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದಂತೆ ವಂದನಾರ್ಪಣಾ ನಿರ್ಣಯವನ್ನು ಸದನವು ಅಂಗೀಕರಿಸಿತು.

ದಿನಾಂಕ: 16.02.2024ರಂದು ಮಾನ್ಯ ಮುಖ್ಯಮಂತ್ರಿಯವರು 2024–25ನೇ ಸಾಲಿನ ಆಯವ್ಯಯ ಅಂದಾಜುಗಳನ್ನು ಒಪ್ಪಿಸಿದರು. ಆಯವ್ಯಯ ಅಂದಾಜುಗಳ ಮೇಲೆ ಸುಮಾರು 8 ಗಂಟೆ 18 ನಿಮಿಷಗಳ ಕಾಲ

ಚರ್ಚೆ ನಡೆಸಿ, ದಿನಾಂಕ:29.02.2024ರಂದು ಸರ್ಕಾರದಿಂದ ಉತ್ತರಿಸಲಾಯಿತು.

ಕಳೆದ ಅಧಿವೇಶನದಿಂದೀಚೆಗೆ ನಿಧನರಾದ ಒಟ್ಟು 07 ಗಣ್ಯರುಗಳಿಗೆ ಸದನವು ತನ್ನ ಸಂತಾಪವನ್ನು ವ್ಯಕ್ತಪಡಿಸಿತು.

ಮಾನ್ಯ ಸಭಾಪತಿಯವರು ಒಂದೇ ಕ್ಷೇತ್ರದಿಂದ ಸತತವಾಗಿ ಎಂಟು ಬಾರಿ ವಿಧಾನ ಪರಿಷತ್ತಿಗೆ ಆಯ್ಕೆಯಾಗಿ ವಿಶ್ವದಾಖಲೆ ಗಳಿಸಿ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ಗೆ ದಾಖಲೆಯಾಗಿರುವುದಕ್ಕೆ ಸದನದಲ್ಲಿ ಅಭಿನಂದನೆಯನ್ನು ಸಲ್ಲಿಸಲಾಯಿತು.

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

ಬೆಂಗಳೂರು ಶಿಕ್ಷಕರ ಕ್ಷೇತ್ರದಿಂದ ನಡೆದ ಉಪ ಚುನಾವಣೆಯಲ್ಲಿ ವಿಧಾನ ಪರಿಷತ್ತಿಗೆ ಚುನಾಯಿತರಾದ ಶ್ರೀ ಪುಟ್ಟಣ್ಣ ಅವರು ಪ್ರಮಾಣ ವಚನ ಸ್ವೀಕರಿಸಿದರು.

ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ 01, 02 ಮತ್ತು 03 ಪಟ್ಟಿಗಳನ್ನು ಮಂಡಿಸಲಾಯಿತು.

ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2023ನ್ನು ಪರಿಶೀಲಿಸಲು ರಚಿಸಲಾಗಿರುವ ಪರಿಶೀಲನಾ ಸಮಿತಿಯ ವರದಿ, ರಾಜ್ಯದಲ್ಲಿರುವ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಕ್ಲಬ್‌ಗಳ ಕಾರ್ಯವೈಖರಿ ಮತ್ತು ಚಟುವಟಿಕೆಗಳ ಬಗ್ಗೆ ಪರಿಶೀಲಿಸಿ ವರದಿ ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯ ವರದಿ, ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿಯ 101ನೇ ವಿಶೇಷ ವರದಿ ಹಾಗೂ 102ನೇ ವರದಿಗಳು, ವಿಧಾನ ಪರಿಷತ್ತಿನ ಅರ್ಜಿಗಳ ಸಮಿತಿಯ 30ನೇ ವರದಿ, ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ

ಪಂಗಡಗಳ ಕಲ್ಯಾಣ ಸಮಿತಿಯ ಎರಡನೇ ವರದಿಗಳನ್ನು ಸದನದಲ್ಲಿ ಮಂಡಿಸಲಾಯಿತು.

ಭಾರತ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 2022–23ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳನ್ನು (ಸಂಪುಟ I ಮತ್ತು II), 2023–24ನೇ ಸಾಲಿನ ಪೂರಕ ಅಂದಾಜು (ಎರಡನೇ ಹಾಗೂ ಅಂತಿಮ ಕಂತು)ಗಳನ್ನು, 5ನೇ ರಾಜ್ಯ ಹಣಕಾಸು ಆಯೋಗವು ರಾಜ್ಯದ ಪಂಚಾಯತ್ ರಾಜ್ ಸಂಸ್ಥೆ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಅನುದಾನ ಹಂಚಿಕೆ ಮತ್ತು ಇತರೆ ಅಧಿಕಾರದ ಬಗ್ಗೆ ನೀಡಿರುವ ಪ್ರಥಮ ವರದಿಯನ್ನು ಮಂಡಿಸಲಾಯಿತು.

ಅರ್ಜಿಗಳ ಸಮಿತಿಯ 02 ಅರ್ಜಿಗಳನ್ನು ಸದನದಲ್ಲಿ ಮಂಡಿಸಲಾಯಿತು.

ರಾಜ್ಯದಲ್ಲಿ 2020–21ನೇ ಸಾಲಿನಲ್ಲಿ ಹೊಸದಾಗಿ ನರ್ಸಿಂಗ್ ಮತ್ತು ಅಲೈಡ್ ಹೆಲ್ತ್ ಸೈನ್ಸಸ್ ಕಾಲೇಜುಗಳಿಗೆ ಮೂಲ ಸೌಕರ್ಯಗಳಿಲ್ಲದಿದ್ದರೂ ಅನುಮತಿ ನೀಡಿ, ಇಂಡಿಯನ್ ನರ್ಸಿಂಗ್ ಕೌನ್ಸಿಲ್ ಅವರು ಹೊರಡಿಸಿರುವ ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವ ವಿಷಯವನ್ನು ಪರಿಶೀಲಿಸಿ ವರದಿ ಸಲ್ಲಿಸಲು ರಚಿಸಲಾಗಿರುವ ವಿಶೇಷ ಜಂಟಿ ಸದನ ಸಮಿತಿಯ ಅವಧಿಯನ್ನು ದಿನಾಂಕ:14.01.2024ರಿಂದ 13.01.2025ರವರೆಗೆ ಹನ್ನೆರಡು ತಿಂಗಳ ಕಾಲ ವಿಸ್ತರಿಸುವ ಪ್ರಸ್ತಾವನ್ನು ಮಂಡಿಸಿ ಸಹಮತಿಯನ್ನು ಪಡೆಯಲಾಯಿತು.

ನಿಯಮ 59 ರಡಿಯಲ್ಲಿ ಒಟ್ಟು 01 ಸೂಚನೆಯನ್ನು ಸ್ವೀಕರಿಸಲಾಗಿದ್ದು, ಸದರಿ ಸೂಚನೆಯನ್ನು ನಿಯಮ 72ರಡಿ ಚರ್ಚಿಸಿ, ಉತ್ತರಿಸಲಾಯಿತು.

ಪ್ರಸ್ತುತ ಅಧಿವೇಶನದಲ್ಲಿ ಒಟ್ಟು 1144 ಪ್ರಶ್ನೆಗಳನ್ನು ಸ್ವೀಕರಿಸಲಾಗಿರುತ್ತದೆ. ಅದರಲ್ಲಿ 120 ಪ್ರಶ್ನೆಗಳನ್ನು ಚುಕ್ಕೆ ಗುರುತಿನ ಪ್ರಶ್ನೆಗಳನ್ನಾಗಿ ಅಂಗೀಕರಿಸಿದ್ದು, ಅವುಗಳ ಪೈಕಿ 72 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 43 ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು. ಲಿಖಿತ ಮೂಲಕ ಉತ್ತರಿಸುವ ಒಟ್ಟು

1012 ಪ್ರಶ್ನೆಗಳ ಪೈಕಿ 792 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 58ರಡಿಯಲ್ಲಿ ಅರ್ಧಗಂಟೆ ಕಾಲಾವಧಿ ಚರ್ಚೆಗಾಗಿ ಒಟ್ಟು 05 ಸೂಚನೆಗಳನ್ನು ಸ್ವೀಕರಿಸಲಾಗಿದ್ದು, ಒಂದು ಸೂಚನೆಯನ್ನು ಚರ್ಚಿಸಲಾಗಿರುತ್ತದೆ.

ನಿಯಮ 72ರಡಿಯಲ್ಲಿ 115 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 22 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 47 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 330ರಡಿಯಲ್ಲಿ 87 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 09 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 46 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 330ಎ ಅಡಿಯಲ್ಲಿ ಒಟ್ಟು 8 ಸೂಚನೆಗಳನ್ನು ಪ್ರಸ್ತಾಪಿಸಲಾಗಿದ್ದು, ಒಂದು ಸೂಚನೆಗೆ ಉತ್ತರಿಸಲಾಯಿತು.

ಮಾನ್ಯ ಶಾಸಕರಾದ ಶ್ರೀ ಎನ್. ರವಿಕುಮಾರ್ ಅವರು ನೀಡಿರುವ ಖಾಸಗಿ ಸದಸ್ಯರುಗಳ ವಿಧೇಯಕವನ್ನು ಮಂಡಿಸಲಾಯಿತು ಹಾಗೂ ಮಾನ್ಯ ಶಾಸಕರಾದ ಶ್ರೀ ಯು.ಬಿ.ವೆಂಕಟೇಶ್ ಅವರು ಮಂಡಿಸಿದ ಖಾಸಗಿ ನಿರ್ಣಯದ ಮೇಲೆ ಚರ್ಚಿಸಲಾಯಿತು.

ಶೂನ್ಯ ವೇಳೆ ಪ್ರಸ್ತಾವನೆಯ ಒಟ್ಟು 46 ಸೂಚನೆಗಳ ಪೈಕಿ 24 ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಯಿತು.

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಒಟ್ಟು 27 ವಿಧೇಯಕಗಳ ಪೈಕಿ ಎರಡು ವಿಧೇಯಕಗಳನ್ನು ಪರಿಶೀಲನಾ ಸಮಿತಿಗೆ ವಹಿಸಲಾಯಿತು. ಉಳಿದ 25 ವಿಧೇಯಕಗಳಿಗೆ ವಿಧಾನ ಪರಿಷತ್ತು ತನ್ನ ಸಹಮತಿಯನ್ನು ನೀಡಿರುತ್ತದೆ.

**ಮಾನ್ಯ ಸಭಾನಾಯಕರು ಹಾಗೂ ವಿರೋಧ ಪಕ್ಷದ ಸದಸ್ಯರು ಮಾತನಾಡಿದ ನಂತರ:–**

ಮಾನ್ಯ ಮುಖ್ಯಮಂತ್ರಿಗಳಿಗೆ, ಮಾನ್ಯ ಸಭಾನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ ಮಾನ್ಯಸರ್ಕಾರದ ಮುಖ್ಯ ಸಚೇತಕರಿಗೆ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಿಗೆ ಎಲ್ಲಾ ಮಂತ್ರಿ ವರ್ಗದವರಿಗೆ, ಪತ್ರಿಕಾ ಹಾಗೂ ಮಾಧ್ಯಮ ವರದಿಗಾರರಿಗೆ, ವಿಧಾನ ಪರಿಷತ್ತಿನ ಸಚಿವಾಲಯದ ಅಧಿಕಾರಿ/ನೌಕರ ವರ್ಗದವರಿಗೆ ಮತ್ತು ಸರ್ಕಾರದ ಎಲ್ಲಾ ಅಧಿಕಾರಿ/ನೌಕರ ವೃಂದದವರಿಗೆ ಸದನದ ಕಾರ್ಯಕಲಾಪಗಳನ್ನು ಸುಗಮವಾಗಿ ನಡೆಸಲು ಸಹಕರಿಸಿದ್ದಕ್ಕೆ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸುತ್ತಾ, ಸಂಜೆ 6.00 ಗಂಟೆಯಲ್ಲಿ ರಾಷ್ಟ್ರಗೀತೆಯನ್ನು ನುಡಿಸುವುದರ ಮೂಲಕ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ) ಸದನವನ್ನು ಅನಿರ್ದಿಷ್ಟ ಕಾಲದವರೆಗೆ ಮುಂದೂಡಿದರು.**

**ಕೆ.ಆರ್. ಮಹಾಲಕ್ಷ್ಮಿ,**
**ಕಾರ್ಯದರ್ಶಿ.**

*****

**ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು. ಕಾ.ಸೂ.1006/ಪಿ5**